# ಹಂಪಿ ಟೈಮ್ಸ್
HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

epaper.hampitimes.com | e-mail: hampitimes@gmail.com | M:94486 33038 Reg.No.PMG/KA/NK/BLY/01/2024-2026

ಸಂಪುಟ:02 • ಸಂಚಿಕೆ: 177 • ಪಿ.ಆರ್.ಜಿ.ಐ.ನಂ.:KARKAN/2023/88055 • ವಿಜಯನಗರ • 15.01.2025 • ಬುಧವಾರ • ಪುಟ:04 • ಬೆಲೆ:2
Volume:02 • Issue: 177 • PRGI No:KARKAN/2023/88055 • VIJAYANAGARA • 15.01.2025 • Wednesday • Page:04 • Rs:2



BOOK YOUR ADVERTISEMENTS
TO REACH MORE READERS
1,00,000+
Digital E-PAPER READERS
M: 94486 33038
Book Advance Get More Benefits
HAMPI TIMES No.1 LEADING VIJAYANAGARA District News Paper

|| ಶ್ರೀ ಗುರು ಬಸವಲಿಂಗಾಯ ನಮಃ ||
ಕಾಯಕಯೋಗಿ, ತ್ರಿವಿಧದಾಸೋಹಿ ಪೂಜ್ಯಶ್ರೀಮನ್ ಜಗದ್ಗುರು ಡಾ.ಸಂಗನಬಸವ ಮಹಾಸ್ವಾಮಿಗಳವರ ದಿವ್ಯಪ್ರಕಾಶನದಲ್ಲಿ
ಪೂಜ್ಯ ನಿರಂಜನ ಶ್ರೀ ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳವರ ಪಾವನಸಾನ್ನಿಧ್ಯದಲ್ಲಿ
ಶಿವಾನಭವ ಸಂಪದ - 1169
ದಿನಾಂಕ: 16-01-2025, ಗುರುವಾರ
ಸಂಜೆ: 7-00 ಗಂಟೆಗೆ
ವಿಷಯ: ಕನ್ನಡ ನಾಡು-ನುಡಿ, ಸಂಸ್ಕೃತಿಗೆ ತ್ಯಾಗವೀರ ಮಹಾದಾನಿ ಸಿರಸಂಗಿ ಶ್ರೀ ಲಿಂಗರಾಜ ದೇಸಾಯಿ ಅವರ ಕೊಡುಗೆ
ಸ್ಥಳ: ಶ್ರೀ ಕೊಟ್ಟೂರುಸ್ವಾಮಿ ಸಂಸ್ಥಾನ ಮಠ, ಹೊಸಪೇಟೆ
ಉಪನ್ಯಾಸ: ಡಾ.ಅಕ್ಕಿ ಬಸವೇಶ. ಹ.ಬೊ.ಹಳ್ಳಿ
ಹರನೀವ ಕಾಲಕ್ಕೆ ಸಿರಿಯು ಬೆನ್ನಲಿ ಬರ್ಕು :
ಹರಿದು ಹೆದ್ದೊರೆಯು, ಕೆರೆ ತುಂಬಿದಂತಯ್ಯಾ
ನೆರೆಯದ ವಸ್ತು ನೆರೆವುದು ನೋಡಯ್ಯ,
ಅರಸು ಪರಿವಾರ ಕೈವಾರ ನೋಡಯ್ಯ.
ಪರಮ ನಿರಂಜನನ ಮರೆವ ಕಾಲಕ್ಕೆ
ತುಂಬಿದ ಹರವಿಯ ಕಲ್ಲು ಕೊಂಡಂತೆ, ಕೂಡಲಸಂಗಮದೇವಾ
ಸರ್ವ ಧರ್ಮಿಯರ ಬರವೆಮೆಗೆ ಪ್ರಾಣ ಜೀವಾಳವಯ್ಯಾ


ಮೈಕ್ರೋ ನ್ಯೂಸ್

## ಹೊಸಪೇಟೆ ನಗರದಲ್ಲಿ ಮನೆ ಅಂಗಳದಲ್ಲಿ ಅರಳಿದ ಸಂಕ್ರಾಂತಿ ಚಿತ್ತಾರಗಳು



ಹೊಸಪೇಟೆಯಲ್ಲಿ ಮಂಜಮ್ಮ ಅವರ ಕೈಯಲ್ಲಿ ಅರಳಿದ ಸಂಕ್ರಮಣ ರಂಗೋಲಿ



ಹೊಸಪೇಟೆಯಲ್ಲಿ ಶಂಕ್ರಮ್ಮ ಅವರು ಬಿಡಿಸಿದ ಮಕರ ಸಂಕ್ರಮಣ ರಂಗೋಲಿ ಜನರ ಗಮನ ಸೆಳೆಯಿತು.

# ಹಂಪಿಯಲ್ಲಿ ಸಂಕ್ರಾಂತಿ ಸಂಭ್ರಮ ನದಿಯಲ್ಲಿ ಮಿಂದೆದ್ದ ಭಕ್ತರು

ನದಿಸ್ನಾನ ಮಾಡಿ ಶ್ರೀ ವಿರೂಪಾಕ್ಷೇಶ್ವರ ಸ್ವಾಮಿ ದರ್ಶನ । ಎಳ್ಳು ಬೆಲ್ಲ ಹಂಚಿ ಸವಿದ ಸಂಕ್ರಾಂತಿ ಸವಿಯೂಟ
ಮನೆ ಮನೆ ಅಂಗಳದಲ್ಲಿ ಸಂಕ್ರಾಂತಿ ಚಿತ್ತಾರ । ನದಿ ನೀರು ಕಲುಷಿತಗೊಳಿಸದಂತೆ ಸ್ನಾನಕ್ಕೆ ಉಚಿತ ಕಡ್ಲೆಹಿಟ್ಟು ವಿತರಣೆ



■ ಹಂಪಿ ಟೈಮ್ಸ್ ಹೊಸಪೇಟೆ

ಮಕರ ಸಂಕ್ರಾಂತಿಗೆ ನಾಡಿನ ವಿವಿಧೆಡೆಗಳಿಂದ ದಕ್ಷಿಣ ಕಾಶಿ ಹಂಪಿಗೆ ಮಂಗಳವಾರ ಆಗಮಿಸಿದ ಭಕ್ತರು ತುಂಗಭದ್ರಾ ನದಿಯಲ್ಲಿ ಮಿಂದೆಂದು ಶ್ರೀವಿರೂಪಾಕ್ಷೇಶ್ವರಸ್ವಾಮಿ ದರ್ಶನ ಪಡೆದರು. ಶ್ರೀ ವಿರೂಪಾಕ್ಷೇಶ್ವರ ಸ್ವಾಮಿಗೆ ಮಕರ ಸಂಕ್ರಮಣದ ವಿಶೇಷ ಪೂಜೆ ಅಭಿಷೇಕ ನೆರವೇರಿಸಲಾಯಿತು.


ದರ್ಶನ ಪಡೆದ ಭಕ್ತರು ಸಂಕ್ರಮ ಸವಿ ಸವಿ ಅಡುಗೆಗಳನ್ನು ತಯಾರಿಸಿಕೊಂಡು ಬಂದಿದ್ದ ಕುಟುಂಬಗಳು ನದಿ ದಡದಲ್ಲಿ, ಸ್ಮಾರಕಗಳ ಬಳಿ, ಹುಲ್ಲುಗಾವಲು ಪ್ರದೇಶದಲ್ಲಿ ಕೂತು ಊಟ ಸವಿದು ಸಂಭ್ರಮಿಸಿದರು. ಹಂಪಿಗೆ ಭೇಟಿ ನೀಡಿದ ಕುಟುಂಬಗಳು ಹಂಪಿ ಜ್ಹೂಗೂ ಮಕ್ಕಳೊಂದಿಗೆ ಭೇಟಿ ನೀಡಿ ಪ್ರಾಣಿ ಪಕ್ಷಿಗಳನ್ನು ತೋರಿಸಿದರು. ಮಕ್ಕಳು ಕುಣಿದಾಡಿ ಸಂಭ್ರಮಿಸಿದರು. ಸಂಕ್ರಮಣದ ದಿನ ನಗರದ ಅನೇಕ ದೇವಾಲಯದಲ್ಲಿ ವಿಶೇಷ ಪೂಜೆಗಳು ಜರುಗಿದವು. ವರ್ಷದ ಮೊದಲ ಹಬ್ಬದ ಸಂಭ್ರಮದಲ್ಲಿ ಜನರು ದೇವಾಲಯಗಳಿಗೆ ಭೇಟಿ ನೀಡಿ ದರ್ಶನ ಪಡೆದರು.

ಹಂಪಿಯಲ್ಲಿ ವೀಕೆಂಡ್‌ಗೆ ಹೋಲಿಸಿದರೆ ಸಂಕ್ರಾಂತಿಗೆ ತುಸು ಕಡಿಮೆ ಜನಸಂಖ್ಯೆ ಇದೆ ಎನ್ನುವ ಮಾತುಗಳು ಕೇಳಿಬಂದವು.



ಪ್ರತಿಷ್ಠಾ ಸಮಾಜ ಸೇವಾ ಟ್ರಸ್ಟ್‌ನಿಂದ ನದಿ ಸ್ನಾನ ಮಾಡುವವರಿಗೆ ಕಡ್ಲೆಹಿಟ್ಟು ಉಚಿತವಾಗಿ ವಿತರಿಸಿ ವಿಷಮುಕ್ತ ಜಾಗೃತಿ ಮೂಡಿಸಿದರು.

ಆನಂದ ಬಾಣ




# ಲಿಂಗ ಸಮಾನತೆ ಸಾಧಿಸು



■ ಹಂಪಿ ಟೈಮ್ಸ್ ಕಂಪ್ಲಿ

ಆಯ್ದಕ್ಕಿ ಲಕ್ಕಮ್ಮ ಅಕ್ಕಿ ಮೇಲಿನ ಆಸೆಯನ್ನು ಬಿಡುವಂತೆ ಹೇಳಿದ್ದಲ್ಲ. ಬದಲಿಗೆ ಲಿಂಗ ಮೋಹವನ್ನು ತ್ಯಜಿಸುವಂತೆ ವಚನ ಮೂಲಕ ಸಾರಿದ್ದಾಳೆ ಎಂದು ಹಂಪಿ ಕನ್ನಡ ವಿವಿಯ ಸಂಶೋಧನಾ ವಿದ್ಯಾರ್ಥಿ ಕೆ.ಅನಂತಾಚಾರ್ ಹೇಳಿದರು.

ಇಲ್ಲಿನ ಗುರುಮಠದಲ್ಲಿ ಲಿಂ.ಓದ್ನೋ ಕರಿಬಸಯ್ಯನವರ ಶಿವಾನಂದಾಶ್ರಮದಿಂದ ಗುರುಮಠದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಲಿಂ.ಗೊಗ್ಗಮರಿಸ್ವಾಮಿಯವರ ಸ್ಮರಣಾರ್ಥ 245ನೇ ಹುಣ್ಣಿಮೆ ಕಾರ್ಯಕ್ರಮದಲ್ಲಿ 'ಶರಣ ಸಾಹಿತ್ಯದಲ್ಲಿ ಮಹಿಳಾ ಪ್ರಜ್ಞೆ' ಕುರಿತು ಉಪನ್ಯಾಸ ನೀಡಿ, ಶರಣರು ಲಿಂಗ ತಾರತಮ್ಯವನ್ನು ವಚನಗಳ ಮೂಲಕ ವಿರೋಧಿಸಿದ್ದಲ್ಲದೆ, ಹೆಣ್ಣು ಮಾಯೆಯಲ್ಲ ಎಂದು ಪ್ರತಿಪಾದಿಸಿದರು. ಪ್ರಸ್ತುತ ದಿನಮಾನಗಳಲ್ಲಿ ಸ್ತ್ರೀವಾದ ಎಂದರೆ ಪುರುಷ ವಿರೋಧಿ ಎನ್ನುವ ಮನೋಭಾವನೆ ವ್ಯಕ್ತವಾಗುತ್ತಿರುವುದು ಸರಿಯಲ್ಲ. ಸ್ತ್ರೀವಾದವು ಲಿಂಗ ಸಮಾನತೆ ಸಾಧಿಸುವುದಾಗಿದೆ. ಲಿಂಗ ಪೂಜೆಗೆ ಸಮಯದ ಕಟ್ಟಳೆ, ಯಾವ ಹಂಗು ಇಲ್ಲದೆ ತನ್ನ ತಾನರಿಯುವುದೇ ನಿಜ ಲಿಂಗಪೂಜೆಯಾಗಿದೆ. ವಚನ ಸಾಹಿತ್ಯದಲ್ಲಿ ಶರಣೆಯರ ಪಾತ್ರ ಮಹತ್ವದ್ದಾಗಿದೆ ಎಂದರು.

ಎಮ್ಮಿಗನೂರಿನ ಗ್ರಾಪಂ.ಸದಸ್ಯ ಹೂಗಾರ್ ಲೋಕೇಶ್ ಮಾತನಾಡಿ, ಶರಣ ಸಾಹಿತ್ಯ ಜೀವನದಲ್ಲಿ ಅನುಷ್ಠಾನಗೊಳಿಸಿದಲ್ಲಿ ಮಾತ್ರ ಭ್ರಷ್ಟಾಚಾರ, ಅಜ್ಞಾನ, ಮೂಢನಂಬಿಕೆ, ಬಡತನ ತೊಲಗಿಸಲು ಸಾಧ್ಯ ಎಂದರು.

ಎಮ್ಮಿಗನೂರಿನ ಸಹಿಪ್ರಾ ಶಾಲೆ ಶಿಕ್ಷಕ ಎಸ್.ರಾಮಪ್ಪ, ಶಿವಾನಂದಾಶ್ರಮದ ಮುಖ್ಯಸ್ಥ ಗೊಗ್ಗ ಚನ್ನಬಸವರಾಜ, ಪ್ರಮುಖರಾದ ಘನಮಠದಯ್ಯ ಹಿರೇಮಠ, ಬಂಗಿ ದೊಡ್ಡ ಮಂಜುನಾಥ, ಕೆ.ಎಂ.ಚಂದ್ರಶೇಖರಯ್ಯ, ಎಚ್.ಎಂ.ಜಗದೀಶ, ಯೋಗೇಶ್, ಎಸ್.ಡಿ.ಬಸವರಾಜ, ಅಶೋಕಕುಕನೂರು, ಬಿ.ಎಂ.ರುದ್ರಯ್ಯ, ಕಲ್ಲುಡಿನಾಗರತ್ನ, ಎ.ಟಿ.ಉಮಾದೇವಿ, ಯು.ಎಂ.ವಿದ್ಯಾಶಂಕರ ಇತರರಿದ್ದರು.

# ರಾಜ್ಯದ ರೈಲು ನಿಲ್ದಾಣ ಅಭಿವೃದ್ಧಿಗೆ 2000 ಕೋಟಿ ರೂ.

## ಜಲ ಶಕ್ತಿ ಮತ್ತು ರೈಲ್ವೆ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿಕೆ

■ ಹಂಪಿ ಉತ್ಸವ ಕೊಪ್ಪಳ

ರೈಲ್ವೆ ಇಲಾಖೆಯಿಂದ ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕ, ಮಧ್ಯ ಕರ್ನಾಟ ಭಾಗದ ರೈಲ್ವೆ ಯೋಜನೆಗಳಿಗೆ ಹೆಚ್ಚಿನ ಒತ್ತು ಕೊಡಲಾಗುತ್ತಿದೆ ಎಂದು ಜಲ ಶಕ್ತಿ ಮತ್ತು ರೈಲ್ವೆ ಖಾತೆಯ ರಾಜ್ಯ ಸಚಿವರಾದ ವಿ.ಸೋಮಣ್ಣ ಹೇಳಿದರು.

ಅವರು ಮಂಗಳವಾರ ಕೊಪ್ಪಳ ನಗರದ ಕುಷ್ಟಗಿ ರಸ್ತೆಯಲ್ಲಿ ನೈಋತ್ಯ ರೈಲ್ವೆ ವತಿಯಿಂದ ಆಯೋಜಿಸಲಾಗಿದ್ದ ರೈಲ್ವೆ ಮೇಲ್ಸೇತುವೆ ಉದ್ಘಾಟಿಸಿ ಮಾತನಡಿದರು. ದೇಶದ ವಿವಿಧೆಡೆ 10, 15, 20 ವರ್ಷದ ಬಹುತೇಕ ರೈಲ್ವೆ ಕಾಮಗಾರಿಗಳು ನೆನಗುದಿಗೆ ಬಿದ್ದಿದ್ದವು. ನರೇಂದ್ರ ಮೋದಿಜಿಯವರು ಪ್ರಧಾನ ಮಂತ್ರಿಗಳಾದ ಬಳಿಕ ಎಲ್ಲಾ ಕಾಮಗಾರಿಗಳು ತ್ವರಿತವಾಗಿ ಪೂರ್ಣಗೊಳ್ಳುವುದಲ್ಲದೇ ಅನೇಕ ಹೊಸ-ಹೊಸ ಯೋಜನೆ ಮತ್ತು ಕಾಮಗಾರಿಗಳು ಲೋಕಾರ್ಪಣೆಯಾಗಿ ಜಾರಿಯಾಗುತ್ತಿವೆ. ರೈಲ್ವೆ ಇಲಾಖೆಯ ನೇಮಕಾತಿ ಪರೀಕ್ಷೆಯನ್ನು ಕನ್ನಡದಲ್ಲಿ ಬರೆಯಲು ಅವಕಾಶ ಕೊಡಬೇಕೆಂಬ ಸುಮಾರು 50 ವರ್ಷಗಳ ಬೇಡಿಕೆಯನ್ನು ಪ್ರಧಾನಿ ನರೇಂದ್ರ ಮೋದಿಜಿ ರವರು ಈಡೇರಿಸಿದ್ದು, ದೇಶದ 10 ರಾಜ್ಯ ಭಾಷೆಗಳಲ್ಲಿ ರೈಲ್ವೆ ಪರೀಕ್ಷೆ ಬರೆಯಬಹುದಾಗಿದೆ. ಕೇಂದ್ರ ಸರ್ಕಾರವು 25 ಸಾವಿರ ಕೋಟಿ ರೂ. ವೆಚ್ಚದಲ್ಲಿ ದೇಶದ ಅನೇಕ ರೈಲು ನಿಲ್ದಾಣಗಳ ಅಭಿವೃದ್ಧಿ ಮಾಡುತ್ತಿದ್ದೇವೆ. ಇದರಲ್ಲಿ ನಮ್ಮ ರಾಜ್ಯಕ್ಕೆ 2000 ಕೋಟಿ ರೂ.ಗಳನ್ನು ರೈಲು ನಿಲ್ದಾಣಗಳ ಅಭಿವೃದ್ಧಿಗೆ ಖರ್ಚು ಮಾಡಲಾಗುತ್ತಿದೆ. ಸಾಮಾನ್ಯ ಜನರು ಓಡಾಡುವ ರೈಲು ನಿಲ್ದಾಣಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ. ಅವುಗಳಲ್ಲಿ ಅಗತ್ಯ ಕುಡಿಯುವ ನೀರು, ಶೌಚಾಲಯ, ನಿರೀಕ್ಷಣಾ ಕೊಠಡಿ, ಕುಳಿತುಕೊಳ್ಳಲು ಆಸನಗಳ ವ್ಯವಸ್ಥೆ ಸೇರಿದಂತೆ ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಹೊಂದಿರಬೇಕೆಂಬ ಉದ್ದೇಶದಿಂದ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲಾಗುತ್ತಿದೆ ಎಂದರು.



ರಾಯದುರ್ಗ-ತುಮಕೂರು, ತುಮಕೂರು-ಚಿತ್ರದುರ್ಗಾ-ದಾವಣಗೇರೆ, ಗದಗ-ವಾಡಿ, ತುಮಕೂರು-ಚಿತ್ರದುರ್ಗಾ, ಕಡೂರು-ಚಿಕ್ಕಮಂಗಳೂರು-ಬೇಲೂರು ಸೇರಿದಂತೆ ರಾಜ್ಯದ ವಿವಿಧ ರೈಲು ಮಾರ್ಗಗಳಿಗಾಗಿ 29 ಸಾವಿರ ಕೋಟಿ ರೂ.ಗಳನ್ನು ಕೇಂದ್ರ ಸರ್ಕಾವು ನೀಡಿದ್ದು, ಎಲ್ಲಾ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ. ಈ ಕೆಲಸಗಳು ಪೂರ್ಣಗೊಳಿಸುತ್ತೇವೆ. ರೈಲ್ವೆ ಸಂಪರ್ಕದಿಂದ ಕರ್ನಾಟಕದಲ್ಲಿ ಹೊಸ ಯುಗ ನಿರ್ಮಾಣವಾಗಲಿದೆ ಎಂದು ಹೇಳಿದರು.

ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಅವರು ಮಾತನಾಡಿ, ಕುಮಷ್ಟಗಿ ರಸ್ತೆಯ ರೈಲ್ವೆ ಮೇಲ್ಸೇತುವೆಯು>>4


ನಿಮ್ಮ ಸಂಸ್ಥೆಯ ಬ್ರ್ಯಾಂಡಿಂಗ್, ಉತ್ಪನ್ನ, ಸೇವೆಗಳ ಪ್ರಚಾರ ಮತ್ತಷ್ಟು ಸುಲಭ!
HAMPI TIMES VIJAYANAGARA
ನಂ 1 ಜಿಲ್ಲಾಮಟ್ಟದ ದಿನಪತ್ರಿಕೆ
ಚಿಕ್ಕ ಮೊತ್ತ ದೊಡ್ಡ ಜಾಹೀರಾತು
ಸ್ಥಳೀಯ ಹಾಗೂ ವ್ಯಾಪಕ ಮಟ್ಟದಲ್ಲಿ ಜನಪ್ರಿಯ
1 ಲಕ್ಷಕ್ಕೂ ಅಧಿಕ ಇ-ಪೇಪರ್ ಓದುಗರು
94486 33038 hampitimes@gmail.com
ಹಂಪಿ ಟೈಮ್ಸ್ ವಿಜಯನಗರದ ಹೆಮ್ಮೆ
ಪ್ರಿಂಟ್ & ಡಿಜಿಟಲ್ ದಿನಪತ್ರಿಕೆ
Print & Digital News Paper
ಹಂಪಿ ಟೈಮ್ಸ್ ಇ-ಪೇಪರ್
ಓದುಗರು:- ಕರ್ನಾಟಕ, ಮಹಾರಾಷ್ಟ್ರ, ಕೇರಳ, ತೆಲಂಗಾಣ, ತಮಿಳುನಾಡು, ಆಂಧ್ರಪ್ರದೇಶ, ಉತ್ತರ ಪ್ರದೇಶ, ಗುಜರಾತ್, ಹರಿಯಾಣ, ರಾಜಸ್ಥಾನ & ಅಮೇರಿಕಾ, ಇಂಗ್ಲೆಂಡ್, ಕೆನಡಾ ಇತರೆ ರಾಷ್ಟ್ರಗಳಲ್ಲಿರುವ ಕನ್ನಡ ಓದುಗರ ಕೈಯಲ್ಲಿ ಹಂಪಿ ಟೈಮ್ಸ್ ಇ ಪೇಪರ್

## ಸ್ಟುಡೆಂಟ್ ಕಾಲಂ

# ರಾಜನ ಮೂರ್ಖ ಸೇವಕ



ಒಂದು ಊರಲ್ಲಿ ಒಬ್ಬ ರಾಜನಿದ್ದನು. ಅವನ ಹೆಸರು ವದ್ಯಣ. ಅವನು ಒಂದು ಕೋತಿಯನ್ನು ಸಾಕಿದ್ದ. ಅವನು ಹೋದಲೆಲ್ಲಾ ಕೋತಿಯನ್ನು ತನ್ನ ಹಿಂದೆ ಕರೆದುಕೊಂಡು ಹೊಗುತಿದ್ದ. ತಾನು ಊಟ ಮಾಡುವಾಗ ಕೋತಿಗೂ ಉಣಿಸುತ್ತಿದ್ದ. ರಾತ್ರಿ ವೇಳೆ ತಾನು ಮಲಗುವ ಕೋಣೆಯಲ್ಲಿಯೇ ಕೋತಿಯನ್ನು ಮಲಗಿಸುತ್ತಿದ್ದ. ಹಾಗಾಗಿ ಇಬ್ಬರೂ ಸ್ನೇಹಿತರಾಗಿದ್ದರು. ನಂತರದ ದಿನಗಳಲ್ಲಿ ರಾಜನು ಅದನ್ನು ತನ್ನ ಸೇವಕನನ್ನಾಗಿ ಮಾಡಿಕೊಂಡನು. ರಾಜನು ಮಲಗಿದಾಗ ಕೋತಿಯು ಕಾವಲು ಕಾಯುತ್ತಿತ್ತು.

ಒಂದು ದಿನ ರಾಜನು ರಾತ್ರಿ ಹೊತ್ತು ನಿದ್ದೆ ಮಾಡುವಾಗ ಕೋತಿಯು ಅವನಿಗೆ ಬೀಸಣಿಗೆಯಿಂದ ಗಾಳಿಯನ್ನು ಬಿಸುತ್ತಿತ್ತು. ಆಗ ಕಿಟಕಿಯಿಂದ ಒಂದು ನೊಣ ಬಂದಿತ್ತು. ಹಾರಿ ಬಂದ ನೋಣವು ರಾಜನ ಮೂಗಿನ ಮೇಲೆ ಕುಳಿತಿತು. ಕೋತಿಯು ಇದನ್ನು ಗಮನಿಸಿತು. ರಾಜನ ನಿದ್ರೆಗೆ ಭಂಗವಾಗದಂತೆ ಹೇಗಾದರು ಮಾಡಿ ಆ ನೋಣವನ್ನು ಹೊಡೆದು ಓಡಿಸಬೇಕು ಎಂದುಕೊಂಡಿತು. ನೊಣ ಓಡಿಸಲು ತುಂಬಾ ಕಷ್ಟಪಟ್ಟಿತು. ಆದರು ನೊಣ ಹೊರಗೆ ಹೋಗಲಿಲ್ಲ.



ಕೋತಿಗೆ ತುಂಬ ಕೋಪ ಬಂದಿತು. ಆ ಕೋತಿಯು ನೊಣವನ್ನು ಕೊಲ್ಲಲ್ಲು ಖಡ್ಗವನ್ನು ತರಲು ಕೋಣೆಗೆ ಹೋಯಿತು. ಅಲ್ಲಿಂದ ಖಡ್ಗವನ್ನು ತಂದಿತು. ಆ ಖಡ್ಗವನ್ನು ಎತ್ತಿ ನೊಣವನ್ನು ಓಡಿಸಲು ಮುಂದಾಯಿತು. ಆಗ ಗಾಳಿಯಲ್ಲಿ ಏನೋ ಶಬ್ದವಾದಂತಾಗಿ ರಾಜನಿಗೆ ಎಚ್ಚರವಾಯಿತು. ಕೋತಿಯ ಕೈಯಲ್ಲಿದ್ದ ಖಡ್ಗವನ್ನು ನೋಡಿದ ರಾಜನು ಗಾಬರಿಗೊಂಡನು.

ರಾಜ ಎಚ್ಚರಗೊಂಡಿದ್ದನ್ನು ಕೋತಿ ಗಮನಿಸಲಿಲ್ಲ. ಅದಕ್ಕೆ ಕೇವಲ ನೊಣ ಮಾತ್ರ ಕಾಣುತ್ತಿತ್ತು. ರಾಜನ ಮೂಗಿನ ಮೇಲೆ ಕುಳಿತದ್ದ ನೊಣವನ್ನು ಕೊಲ್ಲಲ್ಲು ಕೋತಿಯು ಖಡ್ಗವನ್ನು ಎತ್ತಿ ಹಾಕಿತು. ಇನ್ನೇನು ಖಡ್ಗವು ರಾಜ ಮೂಗಿಗೆ ಬೀಳಬೇಕು ಎನ್ನುವಷ್ಟರಲ್ಲಿ ರಾಜನು ಪಕ್ಕಕ್ಕೆ ಹೊರಳಿದನು. ಅವನ ಪ್ರಾಣ ಉಳಿಯಿತು. ಕೂಡಲೇ ಕೋತಿಗೆ ತನ್ನ ತಪ್ಪಿನ ಅರಿವಾಯಿತು. ರಾಜನಿಗೆ ನೊಣದ ವಿಷಯವನ್ನು ತಿಳಿಸಿತು. ಆದರೂ ರಾಜನಿಗೆ ನಂಬಿಕೆ ಬರಲಿಲ್ಲ. ಏನೇ ಆಗಲಿ ಈ ಕೋತಿಯನ್ನು ಇಲ್ಲಿ ಇಟ್ಟುಕೊಳ್ಳುವುದು ಸರಿಯಲ್ಲ ಎನಿಸಿ ಅದನ್ನು ಕಾಡಿಗೆ ಕಳಿಸಿದನು. ಇಲ್ಲಿ ರಾಜ ಕೈಗೊಂಡ ನಿರ್ಧಾರ ಸರಿಯೋ? ತಪ್ಪೋ? ಸೂಕ್ತ ಕಾರಣಗಳೊಂದಿಗೆ ನೀವೇ ನಿರ್ಧರಿಸಿ.

**ಕೆ. ಖಾಸಿಂಬಿ 10ನೇ ತರಗತಿ.**
**ಸರ್ಕಾರಿ ಪ್ರೌಢಶಾಲೆ ಬಸರಕೋಡು. ಹಗರಿಬೊಮ್ಮನಹಳ್ಳಿ(ತಾ)**

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

### ಬೆಳಕಿನ ಹಾದಿ

ರಾಮಾಯಣ, ಮಹಾಭಾರತ, ಸಾಧು ಸಂತರು, ವಿಜ್ಞಾನಿ, ಹೀಗೆ ಪುಣ್ಯ ಪುರುಷರ ಜೀವನದಲ್ಲಿ ನಡೆದ ಘಟನೆಗಳು ಅಥವಾ ನೈತಿಕ ಕಥೆಗಳನ್ನು ಬರೆದು, ಕೊನೆಗೆ ಅಂತಹ ಕಥೆಯಿಂದ ನಮಗೆ ತಿಳಿಯುವ ಮೌಲ್ಯದ ಬಗ್ಗೆ 250 ಪದಗಳ ಮಿತಿಯಲ್ಲಿ ಬೆಳಕಿನ ಹಾದಿ ವಿಭಾಗಕ್ಕೆ ಬರೆದು ಕಳುಹಿಸಿ. ಸೂಕ್ತವಿದ್ದಲ್ಲಿ ಪ್ರಕಟಿಸುತ್ತೇವೆ. ಹೊಸ ಬರಹಗಾರರಿಗೆ ಅವಕಾಶ ಸಿದ್ಧವಾಗಿದೆ.

**–: ಸಂಪಾದಕರು :–**

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ–ಮೇಲ್:hampitimes@gmail.com
M: 94486 33038

## ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

– ಜಾಹೀರಾತು ವ್ಯವಸ್ಥಾಪಕರು.

# ಹಬ್ಬಗಳ ಹೆಬ್ಬಾಗಿಲು ಮಕರ ಸಂಕ್ರಮಣ



ಭಾರತ ದೇಶ ಹಲವು ಭಾಷೆಗಳ ಹಲವು ಜಾತಿಗಳ ನೂರಾರು ಸಂಸ್ಕೃತಿಗಳ ನೆಲೆವೀಡು. ಒಂದು ಮಾಹಿತಿಯ ಪ್ರಕಾರ ಪ್ರತಿ 40 ಕಿಲೋಮೀಟರಿಗೆ ಒಮ್ಮೆ ಈ ದೇಶದ ಜನರು ಮಾತನಾಡುವ ಭಾಷೆ, ಸಂಸ್ಕೃತಿ, ನೆಲ,ಜಲ, ರೀತಿ ನೀತಿಗಳು ಬದಲಾಗುತ್ತದೆ. ಭಾವನೆಗಳು, ಬಣ್ಣಗಳು, ಭಾಷೆಗಳು, ಜಾತಿ ಧರ್ಮಗಳು ಬದಲಾದರೂ ಬಹುತೇಕ ಎಲ್ಲ ಸಂಪ್ರದಾಯಗಳ ಹೂರಣವು ಒಂದೇ ಅದು ಭಾವೈಕ್ಯತೆ. ಇಲ್ಲಿ ಹಿಂದೂ ದೇವರನ್ನು ಪೂಜಿಸುವ, ಗಣೇಶೋತ್ಸವದಲ್ಲಿ ಪಾಲ್ಗೊಳ್ಳುವ ಮುಸಲ್ಮಾನರಿದ್ದಾರೆ. ದರ್ಗಗಳಿಗೆ ಹೋಗುವ, ಸಕ್ಕರೆ ಓದಿಸುವ, ಮೊಹರಂ ಹಬ್ಬದ ಕುಣಿತಗಳಲ್ಲಿ ಮಕ್ಕಳನ್ನು ತೊಡಗಿಸುವ, ಫಕೀರರನ್ನಾಗಿಸುವ ಹಿಂದುಗಳಿದ್ದಾರೆ. ನಾವು ದೇವಸ್ಥಾನಗಳಿಗೆ ಹೋಗುವಷ್ಟೇ ಸಲೀಸಾಗಿ ದರ್ಗಗಳಿಗೂ ಹೋಗುತ್ತೇವೆ ಚರ್ಚುಗಳಿಗೂ ಹೋಗುತ್ತೇವೆ. ಇದು ಭವ್ಯ ಭಾರತದ ಪರಂಪರೆ ಸಾವಿರಾರು ವರ್ಷಗಳಿಂದಲೂ ಇದು ನಡೆದು ಬಂದಿದೆ.

ಭಾರತದಲ್ಲಿ ಅಮಾವಾಸ್ಯೆಗೊಂದು ಹುಣ್ಣಿಮೆ ಗೊಂದು ಹಬ್ಬಗಳು ಬರುತ್ತವೆ. ಹಬ್ಬಗಳು ನಮ್ಮ ಸಂಸ್ಕೃತಿಯ, ನೆಲದ ಪ್ರತೀಕ. ಯುಗಾದಿ ನಮ್ಮ ಹೊಸ ವರ್ಷವಾದರೆ ಶಿವರಾತ್ರಿ ನಮ್ಮ ವರ್ಷದ ಕೊನೆಯ ಹಬ್ಬ. ಎಳ್ಳ ಅಮವಾಸೆ, ಶೀಗಿ ಹುಣ್ಣಿಮೆ, ಸಂಕ್ರಾಂತಿಗಳು ನಮ್ಮ ರೈತರ ಮುಖ್ಯ ಹಬ್ಬಗಳು. ಅದರಲ್ಲೂ ಸಂಕ್ರಾಂತಿ ಹಬ್ಬ ರೈತ ತಾನು ಬೆಳೆದ ಬೆಳೆಯನ್ನು ಕೊಯ್ದು ಒಕ್ಕಲು ಮಾಡುವ, ರಾಶಿ ಮಾಡುವ ಹಬ್ಬ.

ಹಿಂದೂ ಪಂಚಾಂಗದ ಪ್ರಕಾರ ಜೂನ್ 22 ರಂದು ಸೂರ್ಯನು ಉತ್ತರಾಯಣದಿಂದ ದಕ್ಷಿಣಾಯಣದ ಕಡೆಗೆ ಪಥವನ್ನು ಬದಲಿಸಿದರೆ ಜನವರಿ 14ರಂದು ದಕ್ಷಿಣಾಯಣದಿಂದ ಉತ್ತರಾಯಣದ ಕಡೆಗೆ ಪಥವನ್ನು ಬದಲಾಯಿಸುತ್ತಾನೆ. ಅದು ಮಕರ ರಾಶಿಯ ದಿನ. ಈ ಜನವರಿ ತಿಂಗಳಲ್ಲಿ 14 ಇಲ್ಲವೇ 15ನೇ ತಾರೀಕಿನಂದು ಬರುವ ಈ ದಿನವನ್ನು ಸಂಕ್ರಾಂತಿ, ಸಂಕ್ರಮಣ, ಮಕರ ಸಂಕ್ರಾಂತಿ ಎಂದು ಕರೆಯುತ್ತಾರೆ.ಈ ಹಬ್ಬವನ್ನು ವಿವಿಧ ರಾಜ್ಯಗಳಲ್ಲಿ ಒಂದೊಂದು ಹೆಸರಿನಲ್ಲಿ ಕರೆಯಲಾಗುತ್ತದೆ. ಕರ್ನಾಟಕದಲ್ಲಿ ಸುಗ್ಗಿ, ತಮಿಳುನಾಡಿನಲ್ಲಿ ಪೊಂಗಲ್, ಕೇರಳದಲ್ಲಿ ಮಕರವಿಳಕ್ಕು ಹಾಗೂ ತೆಲುಗು ರಾಜ್ಯಗಳಾದ ಆಂಧ್ರ, ತೆಲಂಗಾಣದಲ್ಲಿ ಭೋಗಿ ಹಬ್ಬವನ್ನಾಗಿ ಆಚರಿಸುತ್ತಾರೆ. ಮಕರ ಸಂಕ್ರಮಣದ ದಿನದಂದು ಕೇರಳದ ಶಬರಿಮಲೆಯ ಅಯ್ಯಪ್ಪನ ದೇವಸ್ಥಾನದಲ್ಲಿ ವಿಶೇಷ ಪೂಜೆ–ಪುನಸ್ಕಾರಗಳು ನಡೆಯುತ್ತವೆ. ಸಂಜೆ ಮಕರ ಜ್ಯೋತಿ ದರ್ಶನ ಹಿನ್ನೆಲೆಯಲ್ಲಿ ಭಕ್ತರು ಕ್ಷೇತ್ರಕ್ಕೆ ಆಗಮಿಸಿ ಜ್ಯೋತಿ ದರ್ಶನ ಪಡೆಯುವುದು ವಾಡಿಕೆ.

ಈ ದಿನದಂದು ಬೆಳಿಗ್ಗೆ ಬೇಗನೆ ಏಳುವ ಮನೆಯ ಕಿರಿಕಿರಿಯ ಸದಸ್ಯರೆಲ್ಲ ತಲೆಗೆ ಎಣ್ಣೆಯನ್ನು ಹಚ್ಚಿ ಸಾಬೂನಿನ ಬದಲು ಎಳ್ಳು ಪುಡಿಯನ್ನು ಹಚ್ಚಿ ಸ್ನಾನ ಮಾಡುತ್ತಾರೆ. ವೈಜ್ಞಾನಿಕವಾಗಿ ಹೇಮಂತ ಋತುವಿನ ಕುಳಿರ್ಗಾಳಿಗೆ ಮೈಯಲ್ಲಿನ ಎಣ್ಣೆಯ ಅಂಶ ಮಾಯವಾಗಿ ಚರ್ಮ ವಿಪರೀತ ಶುಷ್ಕವಾಗಿರುತ್ತದೆ. ಹೀಗೆ ಶುಷ್ಕವಾದ ಚರ್ಮಕ್ಕೆ ಕಾಲಕಾಲಕ್ಕೆ ಹಬ್ಬದ ನೆಪದಲ್ಲಿ ಎಳ್ಳಿನ ಸೇವನೆ, ಎಣ್ಣೆಯ ಲೇಪನ ಮಾಡುವ ಮೂಲಕ ಚರ್ಮದ ಮೃದುತ್ವಕ್ಕೆ ಕಾರಣವಾಗುತ್ತವೆ ನಮ್ಮ ಸಂಪ್ರದಾಯಗಳು. ಆಹಾರ ದಲ್ಲಿಯೂ ಅಷ್ಟೇ ಹುರಿದ ಎಳ್ಳು ಮತ್ತು ಹುರಿದ ಕಡಲೆ ಬೀಜ ಇಂದಿನ ಪ್ರಮುಖ ಆಹಾರವಾಗಿ ಬಳಸಲ್ಪಡುತ್ತದೆ. ಎಳ್ಳ ಮಾವಾಸೆಯಿಂದ ಹಿಡಿದು ಸಂಕ್ರಮಣದವರೆಗೆ ಒಂದಲ್ಲ ಒಂದು ಕಾರಣದಿಂದ ಎಳ್ಳು ಮತ್ತು ಶೇಂಗಾ (ನೆಲಗಡಲೆ) ಬಳಸುತ್ತ ದೇಹದಲ್ಲಿ ಜಿಡ್ಡಿನ ಅಂಶವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಹಬ್ಬಗಳ ಹೆಸರಿನಲ್ಲಿ ಕಡ್ಡಾಯವಾಗಿ ನಾವು ಈ ಸಂಪ್ರದಾಯವನ್ನು ಪಾಲಿಸುತ್ತೇವೆ.



**ವೀಣಾ ಹೇಮಂತಗೌಡ ಪಾಟೀಲ್**
**ಲೇಖಕರು, ಮುಂಡರಗಿ, ಗದಗ**

Scan For Digital Colourful
HAMPI TIMES E-paper

ಉತ್ತರ ಭಾರತದಲ್ಲಿ ನದಿಗಳು ಮತ್ತು ಸಮುದ್ರಗಳಲ್ಲಿ ಸ್ನಾನ, ಸೂರ್ಯದೇವನಿಗೆ ಪೂಜೆ, ಗಾಳಿಪಟಗಳನ್ನು ಹಾರಿಸುವ ಮೂಲಕ ಈ ಹಬ್ಬವನ್ನು ಆಚರಿಸಿದರೆ, ದಕ್ಷಿಣ ಭಾರತದಲ್ಲಿ ಅದರಲ್ಲೂ ಕರ್ನಾಟಕ, ಆಂಧ್ರಪ್ರದೇಶ, ತಮಿಳುನಾಡು ಮತ್ತು ಕೇರಳಗಳಲ್ಲಿ ಸುಗ್ಗಿಯಾಗಿ ಈ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸುತ್ತಾರೆ. ಮನೆ ಮನೆಗಳಲ್ಲಿ ಕಬ್ಬು, ಜೋಳದ ದಂಟುಗಳನ್ನು ತಲೆಬಾಗಿಲಿಗೆ ಕಟ್ಟಿ ಶೃಂಗರಿಸಿ ದನಗಳಿಗೆ ಸ್ನಾನ ಮಾಡಿಸಿ ಅವುಗಳ ಕೊಂಬುಗಳಿಗೆ ಬಣ್ಣ ಹಚ್ಚಿ ಸಿಂಗರಿಸುತ್ತಾರೆ. ಮನೆ ಮಂದಿಯೆಲ್ಲ ಎಳ್ಳು ಹಚ್ಚಿ ಅಭ್ಯಂಗಸ್ನಾನ ಮಾಡುತ್ತಾರೆ. ಮನೆಯ ದೇವರಿಗೆ ಮತ್ತು ಸೂರ್ಯದೇವನಿಗೆ ಪೂಜಿಸಿ ಹೊಸ ಅಕ್ಕಿಯಿಂದ ತಯಾರಿಸಿದ ಪೊಂಗಲ್, ಅಕ್ಕಿ ಪಾಯಸ ಮುಂತಾದ ವಿಶೇಷ ಅಡುಗೆಗಳನ್ನು ದೇವರಿಗೆ ನೈವೇದ್ಯ ಮಾಡುತ್ತಾರೆ. ಗ್ರಾಮೀಣ ಭಾಗದಲ್ಲಿ ವಿಧ ವಿಧ ತರಕಾರಿಗಳ ಅಡುಗೆ, ಎಳ್ಳು ಹೋಳಿಗೆ, ಶೇಂಗಾ ಹೋಳಿಗೆ, ಸಿಹಿ ಪೊಂಗಲ್, ಖಾರದ ಪೊಂಗಲ್, ಚಿತ್ರಾನ್ನ ಮೊಸರನ್ನ ಜೊತೆಗೆ ಹಬ್ಬದ ವೈಶಿಷ್ಟ್ಯವೆಂಬಂತೆ (ಕೆಲವೆಡೆ ಎಲ್ಲಾ ರೀತಿಯ ಸೊಪ್ಪುಗಳನ್ನು ಹಾಕಿ) ಗೆಣಸು, ಗಜ್ಜರಿ, ಬದನೆಕಾಯಿ, ಚಳ್ಳವರೆ ಮತ್ತು ಕುಂಬಳಕಾಯಿಯನ್ನು ಚೆನ್ನಾಗಿ ಕುದಿಸಿ ಅದನ್ನು ನುಣ್ಣಗೆ ಅರೆದು ಹಸಿಮೆಣಸಿನಕಾಯಿ ಹಾಕಿ ಉಪ್ಪು ಬೆಲ್ಲ ಮತ್ತು ಎಳ್ಳಿನ ಪುಡಿಯನ್ನು ಹಾಕಿ ಕುದಿಸಿದ ಬರ್ಥವನ್ನು ತಯಾರು ಮಾಡುತ್ತಾರೆ ಇದು ಆರೋಗ್ಯಕ್ಕೆ ಪುಷ್ಟಿದಾಯಕವೂ ಹಿತಕರವೂ ಹೌದು. ಇದನ್ನು ಚಪಾತಿ, ತೆಳ್ಳಗೆ ಎಳ್ಳು ಮೆಣಸಿನ ಬೀಜ ಹಾಕಿ ಬಡಿದು ತಯಾರಿಸಿದ ಜೋಳದ ಮತ್ತು ಸಜ್ಜೆಯ ರೊಟ್ಟಿಗಳ ಜೊತೆಗೆ ತಿನ್ನಬಹುದು.

ಇನ್ನು ಕೆಲವರು ಮನೆಯಲ್ಲಿ ಅಡುಗೆ ಮಾಡಿಕೊಂಡು ಹತ್ತಿರದ ನದಿ ತೀರಗಳಿಗೆ ಹೋಗಿ ಅಲ್ಲಿಯೇ ನದಿಯಲ್ಲಿ ಸ್ನಾನ ಮಾಡಿ ಗಂಗಾಮಾತೆಯನ್ನು, ಸೂರ್ಯ ದೇವರನ್ನು ಪೂಜಿಸಿ, ತಾವು ಮನೆಯಲ್ಲಿ ತಯಾರಿಸಿ ತಂದ ನೈವೇದ್ಯವನ್ನು ಅರ್ಪಿಸಿ ಬಂದು ಬಾಂಧವರೊಂದಿಗೆ ನದಿ ತೀರದಲ್ಲಿಯೇ ಊಟ ಮಾಡಿ ಸಂತಸ ಪಡುತ್ತಾರೆ. ಪುಣ್ಯಕ್ಷೇತ್ರ ದರ್ಶನದ ಜೊತೆ ಒಂದು ಸಂತಸದ ವನವಿಹಾರವು ನಡೆದು ಹೋಗುತ್ತದೆ. ನಂತರ ಸಾಯಂಕಾಲದ ಸಮಯದಲ್ಲಿ ಹುರಿದ ಎಳ್ಳು, ಹುರಿದ ಕಡಲೆ ಬೀಜ, ಕೊಬ್ಬರಿ, ಬೆಲ್ಲದ ಅತ್ಯಂತ ಚಿಕ್ಕ ತುಂಡುಗಳು ಇಲ್ಲವೇ ಸಕ್ಕರೆಯ ಪುಡಿ, ಏಲಕ್ಕಿ ಪುಡಿ ಹಾಗೂ ಬಣ್ಣ ಬಣ್ಣದ ಕುಸುರೆಳ್ಳು (ಎಳ್ಳು ಸಕ್ಕರೆಯ ಪಾಕದಿಂದ ತಯಾರಿಸಿದ ಮಿಶ್ರಣ) ಸೇರಿಸಿದ ಮಿಶ್ರಣವನ್ನು ಈಗಾಗಲೇ ದೇವರಿಗೆ ನೈವೇದ್ಯ ಮಾಡಿರುವುದರಿಂದ ಸಂಜೆ ಮನೆಮನೆಗೂ ತೆರಳಿ ಒಬ್ಬರಿಗೊಬ್ಬರು ಪರಸ್ಪರ ಕೊಟ್ಟು ಕೊಂಡು ಎಳ್ಳು ಬೆಲ್ಲ ತಗೊಂಡು ಒಳ್ಳೆದನ್ನೇ ಮಾತಾಡೋಣ ಎಂದು ಹೇಳಿಕೊಳ್ಳುತ್ತಾರೆ. ಇಲ್ಲಿಯೂ ಕೂಡ ಕಹಿಯಾದ ಎಳ್ಳು ಮತ್ತು ಸಿಹಿಯಾದ ಬೆಲ್ಲ ನಮ್ಮ ಬದುಕಿನ ನೋವು ನಲಿವಿನ ದೃಷ್ಟಾಂತಗಳು. ಎಷ್ಟೇ ಕಷ್ಟ ಬಂದರೂ ಎದೆಗುಂದದೆ ಎಷ್ಟೇ ಸುಖ ಬಂದರೂ ತಗ್ಗದೆ ಎಳ್ಳು ಬೆಲ್ಲದ ಮಿಶ್ರಣದಂತೆ ಸುಖ ದುಃಖಗಳನ್ನು ಸಮನಾಗಿ ಸ್ವೀಕರಿಸಬೇಕು ಎಂಬ ಸಂದೇಶವನ್ನು ಈ ಹಬ್ಬ ನಮಗೆ ನೀಡುತ್ತದೆ.

ಮೈಸೂರು ಭಾಗದಲ್ಲಿ ಕಬ್ಬಿನ ತುಂಡುಗಳನ್ನು, ಬೆಲ್ಲದ ಅಚ್ಚು ಸಕ್ಕರೆಯ ಅಚ್ಚು ಕುಸುರೆಳ್ಳು ಕೊಬ್ಬರಿಯ ಬಾಗಿನವನ್ನು ಚಿಕ್ಕ ಮಕ್ಕಳು ಮನೆ ಮನೆಗೆ ಹೋಗಿ ಕೊಟ್ಟು ಬರುತ್ತಾರೆ.

ಇನ್ನು ಕೆಲವು ಕಡೆ ಚಿಕ್ಕ ಮಕ್ಕಳನ್ನು ಮನೆಯ ಮುಖ್ಯ ಹೊಸ್ತಿಲಿನ ಮೇಲೆ ಕೂಡಿಸಿ ಚಿನ್ನದ ಸರ ಉಂಗುರ ಹವಳ ಮುತ್ತು ಹುಳಿ ಕಡಲೆಕಾಯಿ, ಮಂಡಕ್ಕಿ ಬೆಂಡು ಬೆತ್ತಾಸಗಳ ಮತ್ತಿತರ ವಿವಿಧ ಬಗೆಯ ಹಣ್ಣುಗಳನ್ನು ಒಂದು ಸೇರಿನಲ್ಲಿ ತುಂಬಿ ಮಗುವಿನ ತಲೆಯ ಮೇಲೆ ಸುರಿದು ಆರತಿ ಮಾಡುತ್ತಾರೆ. ಇದನ್ನು ಹಣ್ಣೆರೆಯುವುದು ಎಂದು ಕರೆಯುತ್ತಾರೆ. ಇದು ಮಕ್ಕಳ ವಿಶೇಷ ಆರೋಗ್ಯ, ಆಯುಸ್ಸು ಮತ್ತು ಶ್ರೇಯೋಭಿವೃದ್ಧಿಗಾಗಿ ಮಾಡುವ ಹಬ್ಬ.

ಇಂಗ್ಲಿಷ್ ಕ್ಯಾಲೆಂಡರ್ ತಿಂಗಳ ಮೊದಲ ಹಬ್ಬ ಸಂಕ್ರಾಂತಿಯ ಶುಭಾಶಯಗಳು.....ಬನ್ನಿ ಎಳ್ಳು ಬೆಲ್ಲ ತಿಂದು ಒಳ್ಳೆಯದನ್ನೆ ಮಾತನಾಡೋಣ.

# ಯುವ ಪ್ರತಿಭೆ ಗುರುತಿಸಲು ಕ್ರೀಡಾ ಕಾರ್ಯಕ್ರಮ

## ಕೊಪ್ಪಳ ಸಂಸದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಹೇಳಿಕೆ

**ಹಂಪಿ ಟೈಮ್ಸ್ ಕೊಪ್ಪಳ**

ದಕ್ಷಿಣ ಭಾರತದ ಕುಂಭಮೇಳ ಎಂದೆ ಪ್ರಸಿದ್ದವಾದ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಅಂಗವಾಗಿ ಯುವ ಪ್ರತಿಭೆಗಳನ್ನು ಗುರುತಿಸಲು ಮ್ಯಾರಥಾನ್ ಸೇರಿದಂತೆ ಹಲವಾರು ಕ್ರೀಡಾ ಕಾರ್ಯಕ್ರಮಗಳನ್ನು ಕೊಪ್ಪಳ ನಗರದಲ್ಲಿ ವಿವಿಧ ಸಂಘ– ಸಂಸ್ಥೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕೊಪ್ಪಳ ಸಂಸದರಾದ ಕೆ. ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.

ಅವರು ಮಂಗಳವಾರ ಶ್ರೀ ಗವಿಸಿದ್ದೇಶ್ವರ ಜಾತ್ರೆಯ ಅಂಗವಾಗಿ ಕೊಪ್ಪಳ ನಗರದಲ್ಲಿ ವಿವಿಧ ಸಂಘ–ಸಂಸ್ಥೆಗಳ ಸಹಯೊಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಮ್ಯಾರಥಾನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ಈ ಕ್ರೀಡೆಗಳ ಆಯೋಜನೆಗೆ ಜಿಲ್ಲೆಯ ಜನಪ್ರತಿನಿಧಿಗಳು. ವಾಣಿಜ್ಯೋದ್ಯಮಿಗಳು ಹಾಗೂ ವಿವಿಧ ಸಂಘ– ಸಂಸ್ಥೆಯವರು ಸಹಕಾರ ನೀಡಿದ್ದಾರೆ. 15 ದಿನಗಳವರೆಗೆ ವಿವಿಧ ಕ್ರೀಡಾ ಕಾರ್ಯಕ್ರಮಗಳು ನಡೆಯಲಿವೆ. ಇದರ ಯಶಸ್ವಿಗೆ ಮಾಧ್ಯಮ ಪ್ರತಿನಿಧಿಗಳು ಎಲ್ಲಾ ಕಾರ್ಯಕ್ರಮಗಳ ಹೆಚ್ಚಿನ ಪ್ರಚಾರ ನೀಡುತ್ತಿದ್ದಾರೆ. ಎಲ್ಲರೂ ಸೇರಿ ಶ್ರೀ ಗವಿಸಿದ್ದೇಶ್ವರ ಜಾತ್ರೆಗೆ ಮೆರಗು ತರೋಣ. ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳಿಗೆ ಅಭಿನಂದನೆಗಳು ಎಂದು ಹೇಳಿದರು.

ಮಾಜಿ ಸಂಸದರಾದ ಸಂಗಣ್ಣ ಕರಡಿ ಅವರು ಮಾತನಾಡಿ ಗವಿಸಿದ್ದೇಶ್ವರ ಜಾತ್ರೆಯ ಅಂಗವಾಗಿ ಕಳೆದ ಹತ್ತು ವರ್ಷಗಳಿಂದ ಮ್ಯಾರಥಾನ್ ಕಾರ್ಯಕ್ರಮ ಆಯೋಜನೆ ಮಾಡುತ್ತಾ ಬರಲಾಗುತ್ತಿದೆ. ಇದರಿಂದ ಎಲ್ಲಾ ಕ್ರೀಡಾ ಪಟುಗಳನ್ನು ಒಟ್ಟಿಗೆ ಸೇರಿಸಲು ಅನುಕೂಲವಾಗಲಿದೆ ಮತ್ತು ಕ್ರೀಡಾ ಪಟುಗಳು ಇದರಲ್ಲಿ ಭಾಗವಹಿಸುವುದರಿಂದ ಅವರ ಉತ್ಸಾಹ ಇಮ್ಮಡಿ ಆಗಲಿದೆ ಎಂದು ಹೇಳಿದರು

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಮಾತನಾಡಿ ಮೈಸೂರು ದಸರಾದಂತೆ ನಮ್ಮಲ್ಲಿಯೂ ಬರುವ ದಿನಗಳಲ್ಲಿ ದೊಡ್ಡ ಮಟ್ಟದಲ್ಲಿ ಕ್ರೀಡಾ ಕಾರ್ಯಕ್ರಮಗಳು ನಡೆಯಬೇಕು. ಕ್ರೀಡೆಯಿಂದ ಯುವಕರು ಮಾನಸಿಕ ಮತ್ತು ದೈಹಿಕವಾಗಿ ಸಬಲರಾಗುತ್ತಾರೆ. ಇಂದಿನ ಒತ್ತಡ ಜೀವನ ಬದುಕಿನಲ್ಲಿ ಕ್ರೀಡೆ ತುಂಭಾ ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ ಇಂದಿನ ಮ್ಯಾರಥಾನ್ ಕಾರ್ಯಕ್ರಮದಲ್ಲಿ ಹಲವಾರು ವಿದ್ಯಾರ್ಥಿಗಳು ಭಾಗವಹಿಸಿದ್ದು ಕ್ರೀಡೆ ಎಲ್ಲರಿಗೂ ಒಟ್ಟಿಗೆ ಸೇರಿಸುವದರ ಜೊತೆಗೆ ನಮ್ಮ ಆರೋಗ್ಯಕ್ಕೆ ಬಹಳ ಒಳ್ಳೆಯದು. ಇದರಲ್ಲಿ ಭಾಗವಹಿಸುವದು ಬಹಳ ಮುಖ್ಯವಾಗಿದೆ ಎಂದು ಹೇಳಿದರು

ಮ್ಯಾರಥಾನ್ ಓಟ ಹಳೆ ಆರ್.ಟಿ.ಓ ಕಛೇರಿ ಹತ್ತಿರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಆರಂಭವಾಗಿ. ಗಂಜ ಸರ್ಕಲ್. ಅಶೋಕ ವೃತ್ತ. ಗಡಿಯಾರ ಕಂಬದ ಮಾರ್ಗವಾಗಿ ಗವಿಮಠದವರೆಗೆ ನಡೆಯಿತು. ಇದರಲ್ಲಿ ಭಾಗವಹಿಸಿ ಪ್ರಥಮ. ದ್ವಿತೀಯ. ತೃತೀಯ ಸೇರಿದಂತೆ ಒಟ್ಟು ಎಂಟು ಸ್ಥಾನ ಪಡೆದ ಅಭ್ಯರ್ಥಿಗಳಿಗೆ ಗವಿಮಠದಲ್ಲಿ ಪ್ರಶಸ್ತಿ ಫಲಕದ ಜೊತೆಗೆ ನಗದು ಬಹುಮಾನವನ್ನು ಗಣ್ಯರಿಂದ ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ. ಶ್ರೀನಿವಾಸ ಗುಪ್ತಾ. ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಬಸವರಾಜ. ಕ್ರೀಡಾ ಇಲಾಖೆಯ ಅಧಿಕಾರಿ ವಿಠ್ಠಲ ಚಾಬಗೌಡರ, ಕೃಷ್ಣ ಇಟಂಗಿ ಸೇರಿದಂತೆ ವಿವಿಧ ಶಾಲಾ–ಕಾಲೇಜುಗಳ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಇತರೆ ಹಲವಾರು ಜನರು ಭಾಗವಹಿಸಿದ್ದರು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA, PRGI No:KARKAN/2023/88055

## ಕವಿ ಮನಸು

### ದಿನಾ ಬರುವವರಲ್ಲ

ಮೊಳಗುತಿದೆ
ಶಂಖ ನಾದ
ವ್ರತಸ್ಥರಾದ
ಅಘೋರಿಗಳು
ಪರಶಿವನ ಸೇವೆಗಾಗಿ
ಬರುವರು
ಕುಂಭ ಮೇಳಕ್ಕೆ

ಎಲ್ಲಿದ್ದರು
ಎಲ್ಲಿಂದ ಬಂದರು
ವಿಭಿನ್ನ ಬದುಕಿನ
ಅರೆ ಬೆತ್ತಲೆಯ
ಬಿಸಿಲು,ಮಳೆ,ಗಾಳಿಗೆ
ಅಂಜದೆ
ವಿಭೂತಿಯ ಹೊದಿಕೆ ಹೊತ್ತ
ಸ್ಮಶಾಣವಾಸಿಗಳು

ವರುಷಗಳು ಕಾದು
ಜಯಂತನುದುರಿಸಿದ
ಅಮೃತ ಬಿಂದುಗಳ
ಸ್ಪರ್ಶಿಸಲು
ತ್ರಿವೇಣಿ ಸಂಗಮದಲಿ ಮಿಂದು
ಪುನೀತರಾಗಲು
ಬರುವರು ಜನಸ್ತೋಮ

ಗುಹೆ, ಗೋರಿ,
ಹಿಮಾಲಯ ವಾಸಿ
ಅಘೋರಿ ಜಟಾಧಾರಿ
ಆಸ್ತಿ ಮಾಲಾದಾರಿ
ನಾಡಿಗೆ ನಾವು
ದಿನಾ ಬರುವವರಲ್ಲ

– **ಗುರಾನಿ,** ದಾವಣಗೆರೆ

visit our website for daily updates
www.hampitimes.com
epaper.hampitimes.com

(ರಾಷ್ಟ್ರೀಯ ನವೋದ್ಯಮ ದಿನ ಜ–16)

# ನವೋದ್ಯಮವೇ ಸ್ವಾವಲಂಬಿ ರಾಷ್ಟ್ರದ ಬೆನ್ನುಮೂಳೆ

ಭಾರತದಲ್ಲಿ, ಪ್ರತಿ ವರ್ಷ ಜನವರಿ 16ರಂದು ರಾಷ್ಟ್ರೀಯ ನವೋದ್ಯಮ ದಿನವನ್ನು ಆಚರಿಸಲಾಗುತ್ತದೆ. ನಾವೀನ್ಯತೆ, ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಗೆ ಚಾಲನೆ ನೀಡುವಲ್ಲಿ ನವೋದ್ಯಮಗಳ ಕೊಡುಗೆಗಳನ್ನು ಗುರುತಿಸಲು, ದೇಶಾದ್ಯಂತ ನವೋದ್ಯಮವನ್ನು ಮತ್ತು ಉದ್ಯಮಶೀಲತೆಯನ್ನು ಉತ್ತೇಜಿಸಲು, ನವೋದ್ಯಮ ಸಂಸ್ಕೃತಿಯನ್ನು ತಳಮಟ್ಟದಿಂದ ಗಟ್ಟಿಗೊಳಿಸುವ ಉದ್ದೇಶದಿಂದ ಈ ದಿನವನ್ನು ಆಚರಿಸಲಾಗುತ್ತದೆ. 2022ರಲ್ಲಿ ಈ ದಿನವನ್ನು ಮೊದಲ ಬಾರಿಗೆ ಆಚರಿಸಲಾಯಿತು. ನವೋದ್ಯಮಗಳನ್ನು ಸ್ವಾವಲಂಬಿ ಭಾರತದ "ಬೆನ್ನುಮೂಳೆ" ಎಂದು ಕರೆಯಲಾಗುತ್ತದೆ. ದೇಶದಲ್ಲಿ ಹಾಗೂ ದೇಶಕ್ಕಾಗಿ, ದೇಶದಿಂದ ಆವಿಷ್ಕಾರ ಮಾಡುವ ಮೂಲ ಉದ್ದೇಶವನ್ನು ಹೊಂದಿದೆ. ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ದೃಷ್ಟಿಯನ್ನು ಸಾಧಿಸುವಲ್ಲಿ ನವೋದ್ಯಮದ ಪಾತ್ರವನ್ನು ಒತ್ತಿಹೇಳುತ್ತದೆ.

**ರಾಷ್ಟ್ರೀಯ ನವೋದ್ಯಮ ದಿನವು ಹಲವಾರು ಉದ್ದೇಶಗಳನ್ನು ಪೂರೈಸುತ್ತದೆ:**
**ಗುರುತಿಸುವಿಕೆ:** ನಾವೀನ್ಯತೆ, ಉದ್ಯೋಗ ಸೃಷ್ಟಿ ಮತ್ತು ತಾಂತ್ರಿಕ ಪ್ರಗತಿಯಲ್ಲಿ ನವೋದ್ಯಮಗಳ ಪಾತ್ರವನ್ನು ಅಂಗೀಕರಿಸುತ್ತದೆ. ಉತ್ತೇಜನ: ತಮ್ಮ ಸೃಜನಶೀಲತೆ ಮತ್ತು ಸಮಸ್ಯೆ–ಪರಿಹರಿಸುವ ಕೌಶಲ್ಯಗಳನ್ನು ಬಳಸಿಕೊಳ್ಳುವ ಮೂಲಕ ಭಾರತದ ಬೆಳವಣಿಗೆಗೆ ಕೊಡುಗೆ ನೀಡಲು ಉದ್ಯಮಿಗಳನ್ನು ಪ್ರೇರೇಪಿಸುತ್ತದೆ. ನೀತಿ ಬೆಂಬಲ: ಸ್ಟಾರ್ಟಅಪ್ ಇಂಡಿಯಾದಂತಹ ಉಪಕ್ರಮಗಳ ಮೂಲಕ ನವೋದ್ಯಮಗಳಿಗೆ ಅನುಕೂಲಕರ ವಾತಾವರಣವನ್ನು ಸೃಷ್ಟಿಸಲು ಸರ್ಕಾರದ ಗಮನವನ್ನು ಕೇಂದ್ರೀಕರಿಸುವಂತೆ ಮಾಡುವುದು.

**ಸ್ಟಾರ್ಟಅಪ್ ಇಂಡಿಯಾ ಯೋಜನೆ:** 2016ರಲ್ಲಿ ಪ್ರಾರಂಭವಾದ ಸ್ಟಾರ್ಟಅಪ್ ಇಂಡಿಯಾ ಯೋಜನೆಯು ದೃಢವಾದ ನವೋದ್ಯಮ ಪರಿಸರ ವ್ಯವಸ್ಥೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಅವುಗಳೆಂದರೆ–



ರಾಜು. ಭೂಶೆಟ್ಟಿ
ಲೇಖಕರು, ಹುಬ್ಬಳ್ಳಿ

Scan For Digital Colourful
HAMPI TIMES E-paper

ಸರಳೀಕೃತ ನೋಂದಣಿ ಪ್ರಕ್ರಿಯೆಗಳು. ಅರ್ಹ ಸ್ಟಾರ್ಟಪ್‌ಗಳಿಗೆ ತೆರಿಗೆ ವಿನಾಯಿತಿಗಳು. ಫಂಡ್ ಆಫ್ ಫಂಡ್ಸ್ ಸ್ಕೀಮ್ ಮೂಲಕ ನಿಧಿಯ ಬೆಂಬಲ. ಯಶಸ್ವಿ ಉದ್ಯಮಿಗಳ ಮೂಲಕ ಮಾರ್ಗದರ್ಶನ ಮುಂತಾದವು

ರಾಷ್ಟ್ರೀಯ ನವೋದ್ಯಮ ದಿನವನ್ನು ಏಕೆ ಆಚರಿಸಲಾಗುತ್ತದೆ?

ಭಾರತದ ಆರ್ಥಿಕ ಬೆಳವಣಿಗೆ, ನಾವೀನ್ಯತೆ ಮತ್ತು ಉದ್ಯೋಗ ಸೃಷ್ಟಿಗೆ ನವೋದ್ಯಮಗಳ ಪ್ರಮುಖ ಕೊಡುಗೆಗಳನ್ನು ಗೌರವಿಸಲು ಆಚರಿಸಲಾಗುತ್ತದೆ. ತಾಂತ್ರಿಕ ಪ್ರಗತಿಯನ್ನು ಉತ್ತೇಜಿಸುವಲ್ಲಿ ಮತ್ತು ಸೃಜನಶೀಲ ಪರಿಹಾರಗಳ ಮೂಲಕ ಸಾಮಾಜಿಕ ಸವಾಲುಗಳನ್ನು ಎದುರಿಸುವಲ್ಲಿ ನವೋದ್ಯಮಗಳು ಪ್ರಮುಖ ಪಾತ್ರವಹಿಸುತ್ತವೆ. ಈ ದಿನವು ಉದ್ಯಮಿಗಳನ್ನು ಪ್ರೇರೇಪಿಸುವ ಗುರಿಯನ್ನು ಹೊಂದಿದೆ ಮತ್ತು ಭಾರತವನ್ನು ನಾವೀನ್ಯತೆ ಮತ್ತು ಸ್ವಾವಲಂಬನೆಯ ಕೇಂದ್ರವಾಗಿ ಪರಿವರ್ತಿಸುವಲ್ಲಿ ನವೋದ್ಯಮದ ಪ್ರಯತ್ನಗಳನ್ನು ಗುರುತಿಸುತ್ತದೆ. ಆಚರಣೆಯು ಇದನ್ನು ಸಹ ಒತ್ತಿಹೇಳುತ್ತದೆ: ಕೊಡುಗೆಗಳನ್ನು ಒಪ್ಪಿಕೊಳ್ಳುವುದು: ಭಾರತದ ಅಭಿವೃದ್ಧಿಯ "ಬೆನ್ನೆಲುಬು" ಎಂದು ಸ್ಟಾರ್ಟಪ್‌ಗಳ ಪಾತ್ರವನ್ನು ಎತ್ತಿ ತೋರಿಸುವುದು.

**ಆವಿಷ್ಕಾರವನ್ನು ಉತ್ತೇಜಿಸುವುದು:** ನವೀನ ವಿಧಾನಗಳೊಂದಿಗೆ ನಿರ್ಣಾಯಕ ಸವಾಲುಗಳನ್ನು ಪರಿಹರಿಸಲು ಕೊಡುಗೆ ನೀಡಲು ಹೊಸ ಉದ್ಯಮಿಗಳನ್ನು ಪ್ರೇರೇಪಿಸುವುದು. ಸ್ಟಾರ್ಟಅಪ್ ಇಂಡಿಯಾ ಸ್ಕೀಮ್‌ನಂತಹ ಸರ್ಕಾರಿ ಉಪಕ್ರಮಗಳನ್ನು ಬಲಪಡಿಸುವುದು. ಇದು ಹಣಕಾಸು, ನಿಯಂತ್ರಕ ಮತ್ತು ಮಾರ್ಗದರ್ಶನ ಬೆಂಬಲವನ್ನು ಒದಗಿಸುತ್ತದೆ. ಭಾರತದಲ್ಲಿ ನವೋದ್ಯಮಗಳು ಧನಸಹಾಯ, ಮೂಲಸೌಕರ್ಯ ಮತ್ತು ಉದ್ಯಮ ಕ್ಷೇತ್ರಕ್ಕೆ ಅತ್ಯಗತ್ಯವಾಗಿರುವ ಕೌಶಲ್ಯಗಳು ಸೇರಿದಂತೆ ಹಲವು ಸವಾಲುಗಳನ್ನು ಎದುರಿಸುತ್ತಿವೆ.



ನವೋದ್ಯಮ ಪ್ರಾರಂಭಿಸಲು ಬೇಕಾಗುವ ಸಾಲದ ಮೊತ್ತಕ್ಕೆ ಜಾಮೀನುದಾರರು ದೊರಕದೇ ಇರುವುದರಿಂದ ಸಾಲ ಪಡೆಯಲು ಕಷ್ಟವಾಗಬಹುದು. ನವೋದ್ಯಮಗಳು ನಷ್ಟ ಹೊಂದಿದರೆ ಹೇಗೆ? ಎಂಬ ಭಯದಿಂದಾಗಿ ಹೂಡಿಕೆದಾರರು ಅವರಿಗೆ ಹಣ ನೀಡಲು ಹಿಂಜರಿಯಬಹುದು. ಅಸಮರ್ಪಕ ಭೌತಿಕ ಮತ್ತು ಡಿಜಿಟಲ್ ಮೂಲಸೌಕರ್ಯದಿಂದಾಗಿ ನವೋದ್ಯಮಗಳು ಸವಾಲುಗಳನ್ನು ಎದುರಿಸಬಹುದು. ನವೋದ್ಯಮಗಳು ಅಂತಾ ರಾಷ್ಟ್ರೀಯ ಮಾರುಕಟ್ಟೆಗಳಿಗೆ ಸೀಮಿತ ಪ್ರವೇಶವನ್ನು ಹೊಂದಿರಬಹುದು. ಕೌಶಲ್ಯ ಹೊಂದಿದ ಜನರನ್ನು ಹುಡುಕಲು ಹೆಣಗಾಡಬಹುದು. ನವೋದ್ಯಮಗಳು ನುರಿತ ಪ್ರತಿಭೆಗಳ ಕೊರತೆಯನ್ನು ಕೂಡ ಎದುರಿಸಬಹುದು. ನವೋದ್ಯಮಗಳು ಅದೇ ಮಾರುಕಟ್ಟೆಯಲ್ಲಿ ಇತರ ವ್ಯವಹಾರಗಳಿಂದ ಸ್ಪರ್ಧೆಯನ್ನು ಎದುರಿಸಬಹುದು. ಗ್ರಾಹಕರ ನಂಬಿಕೆಯನ್ನು ಗಳಿಸುವ ಮತ್ತು ಮಾರುಕಟ್ಟೆಯನ್ನು ಭೇದಿಸುವ ಸವಾಲುಗಳನ್ನು ಎದುರಿಸಬಹುದು. ಆರ್ಥಿಕ ಮತ್ತು ನೀತಿ (ಪಾಲಿಸಿ) ಅಂಶಗಳಿಂದಾಗಿ ನವೋದ್ಯಮಗಳು ಅನಿಶ್ಚಿತತೆಯನ್ನು ಎದುರಿಸಬಹುದು.

ನವೋದ್ಯಮಗಳನ್ನು ಬಲಪಡಿಸಲು ಹೂಡಿಕೆಗೆ ಅನುಕೂಲಕರ ವಾತಾವರಣವನ್ನು ನಿರ್ಮಿಸಿ, ಹೂಡಿಕೆದಾರರನ್ನು ಪ್ರೋತ್ಸಾಹಿಸುವುದು ತುಂಬಾ ಅಗತ್ಯವಾಗಿದೆ. ಕಾಲೇಜು ಹಂತದಲ್ಲಿಯೇ ನವೋದ್ಯಮದ ಕುರಿತು ಹೆಚ್ಚಿನ ಮಾಹಿತಿ ಒದಗಿಸುವುದು. ಉದ್ಯಮಶೀಲತೆಯ ಶಿಕ್ಷಣದ ಕೋರ್ಸಗಳ ಮೂಲಕ ಯುವಕರು ತಮ್ಮ ಸ್ವಂತ ಉದ್ಯಮವನ್ನು ಆರಂಭಿಸಲು ಪ್ರೇರೇಪಿಸುವುದು. ಉತ್ತಮ ಬಿಸಿನೆಸ್ ನಿರ್ವಹಣೆ, ಹಣಕಾಸು, ಮಾರ್ಕೆಟಿಂಗ್, ನಾಯಕತ್ವ, ತಂತ್ರಜ್ಞಾನ ನಿರ್ವಹಣೆಗೆ ತರಬೇತಿ ನೀಡುವ ಕಾರ್ಯಕ್ರಮಗಳನ್ನು ಆಯೋಜಿಸುವುದು. ಉದ್ಯಮ ಕ್ಷೇತ್ರದಲ್ಲಿ ಯಶಸ್ಸನ್ನು ಸಾಧಿಸಿರುವ ದಿಗ್ಗಜರಿಂದ ಸರಣಿ ಕಾರ್ಯಕ್ರಮಗಳ ಮೂಲಕ ಮಾರ್ಗದರ್ಶನ ಒದಗಿಸುವುದು.

ಒಟ್ಟಾರೆಯಾಗಿ ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೇವಲ ಪದವಿ ಶಿಕ್ಷಣ ಮಾತ್ರ ಗಳಿಸಿದರೆ ಸಾಲದು, ಬಹುಮುಖ ಕೌಶಲ್ಯಗಳನ್ನು ಕೂಡ ಬೆಳಸಿಕೊಳ್ಳುವುದು ಅನಿವಾರ್ಯವೂ ಹೌದು. ಉದ್ಯಮ ಕ್ಷೇತ್ರದಲ್ಲಿ ಯಶಸ್ಸು ಎಂಬುದು ತಕ್ಷಣವೇ ದೊರಕುವಂತದಲ್ಲ ಎಂಬುದನ್ನು ಒಪ್ಪಿಕೊಂಡು ತಾಳ್ಮೆಯಿಂದ ಕಾರ್ಯನಿರ್ವಹಿಸಿದರೆ ಯಶಸ್ಸು ಸಿಕ್ಕೇ ಸಿಗುತ್ತದೆ. ಆತ್ಮವಿಶ್ವಾಸವೇ ನವೋದ್ಯಮದ ಬುನಾದಿಯಾಗಲಿ.

## ಹಂಪಿ ಉತ್ಸವ ಹೇಗಿರಬೇಕು? ಹಂಪಿ ಉತ್ಸವ - 2025 - ಜನಮನ

ಹಂಪಿ ಉತ್ಸವ ಹಂಪಿಯ ಗತಕಾಲ ವೈಭವವನ್ನು ತಿಳಿಸುವ ಉತ್ಸವವಾಗಿದೆ. ಇಲ್ಲಿ ಕಲಾವಿದರಿಗೆ ವೇದಿಕೆ ಸೃಷ್ಟಿಯಾಗಲಿದ್ದು ದೇಶವಿದೇಶಗಳಿಂದ ಕಲಾವಿದರರು, ವಿಮರ್ಶಕರು, ಪ್ರವಾಸಿಗರು ಭಾಗಿಯಾಗುತ್ತಾರೆ. ಇಂತಹ ವೈಭವೋಪೇತ ಪಾರಂಪರಿಕ ಉತ್ಸವಕ್ಕೆ ಚಾಲನೆ ನೀಡಿದವರು ಸನ್ಮಾನ್ಯ ಎಂ.ಪಿ. ಪ್ರಕಾಶ್ ನವರು, ಈ ಹಂಪಿ ಉತ್ಸವವನ್ನು ಆಚರಿಸಲು ಜಿಲ್ಲಾಡಳಿತ ಹಾಗೂ ಸರ್ಕಾರದ ಪಾತ್ರ ಬಹಳ ಮುಖ್ಯವಾದುದು ಎಲ್ಲಾ ರೀತಿಯ ವ್ಯವಸ್ಥೆಗಳು ಅಚ್ಚುಕಟ್ಟಾಗಿ ಸಿದ್ಧಗೊಳಿಸುವ ಜವಾಬ್ದಾರಿ ಹಾಗೂ ನಿರ್ವಹಣೆ, ಎಲ್ಲಾ ಕಲಾವಿದರ ಸಂಯೋಜನೆ, ಅವರೆಲ್ಲರಿಗೂ ಪೂರಕ ವ್ಯವಸ್ಥೆ ಕಲ್ಪಿಸುವುದು ಎಲ್ಲವೂ ಒಂದು ಬೃಹತ್ತವಾದ ನಿಯೋಜನೆಯ ಭಾರವಾಗಿದೆ. ಇಂತಹ ಸಂದರ್ಭಗಳಲ್ಲಿ ಕೆಲವು ಸಾಧಕ ಬಾಧಕಗಳು ಆಗುವುದು ಸರ್ವೇ ಸಾಮಾನ್ಯ, ಈ ನಿಟ್ಟಿನಲ್ಲಿ ಕೆಲವೊಂದು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೆ ಹಂಪಿ ಉತ್ಸವವನ್ನು ಯಶಸ್ವಿಗೊಳಿಸಲು ಪ್ರಯತ್ನಿಸಬಹುದು.




### ಹಂಪಿ ಉತ್ಸವ ಯಶಸ್ವಿಗೆ ಕೆಲ ಸಲಹೆಗಳು

- ವಿಜಯನಗರ ಕಾಲದ ವೈಭವವನ್ನು ಹೋಲುವ ಕಲೆಗಳಿಗೆ ಪ್ರೋತ್ಸಾಹ ನೀಡಬೇಕು, ಅಸಾಂಸ್ಕೃತಿಕವಾದ ಕಾರ್ಯಕ್ರಮಗಳು ನಡೆಯುವುದನ್ನು ತಡೆಯಬೇಕು, ಕೇವಲ ಸಾಂಪ್ರದಾಯಿಕ ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯಕ್ರಮಗಳಿಗೆ ಉತ್ತೇಜನ ನೀಡಬೇಕು.
- ಸಾರಿಗೆ ವ್ಯವಸ್ಥೆ, ಜನಸಂದಣಿ ನಿಯಂತ್ರಣ ಅಚ್ಚುಕಟ್ಟಾಗಿ ನಡೆಯಬೇಕು. ಶಿಸ್ತು, ಶುಚಿತ್ವವನ್ನು ಕಾಪಾಡಬೇಕು. ಬೀದಿ ವ್ಯಾಪಾರಿಗಳಿಗೆ ಹಾಗೂ ತಿಂಡಿ ತಿನಿಸುಗಳಿಗೆ ಪ್ರತ್ಯೇಕ ವ್ಯವಸ್ಥೆ ಮಾಡಬೇಕು. ಅವು ಕಾರ್ಯಕ್ರಮದಿಂದ ಹಾಗೂ ಹಂಪಿ ಸ್ಮಾರಕಗಳಿಂದ ಬಹು ದೂರದಲ್ಲಿರಬೇಕು. ಇದರಿಂದ ಪ್ಲಾಸ್ಟಿಕ್ ಕವರ್, ನೀರಿನ ಬಾಟಲ್, ತಿಂದ ಪದಾರ್ಥಗಳ ವಿಸರ್ಜನೆ ಎಲ್ಲೆಂದ ರಲ್ಲಿ ಬಿಸಾಡುವುದು, ಮಲಿನಗೊಳಿಸುವುದನ್ನು ತಡೆಗಟ್ಟಬಹುದು.
- ಜನಸಾಮಾನ್ಯರಿಗೆ ಸಾರಿಗೆ, ಪಾರ್ಕಿಂಗ್ ವ್ಯವಸ್ಥೆ ಕಾರ್ಯಕ್ರಮದ ವೇದಿಕೆಗೆ ಹತ್ತಿರವಿರಲಿ, ಬಹಳ ದೂರ ನಡೆಯಲು ಸಾಧ್ಯವಾಗದ ಹಿರಿಯನಾಗರಿಕರು ಮಕ್ಕಳು ಕಾರ್ಯಕ್ರಮದಿಂದ ವಂಚಿತರಾಗದಿರಲಿ.
- ಉದ್ಘಾಟನಾ ಸಮಾರಂಭಗಳನ್ನು ಬೆಳಗಿನ ಸಮಯದಲ್ಲಿ ಕೈಗೊಂಡರೆ ರಾತ್ರಿ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಸಮಯ ಸಿಗುತ್ತದೆ. ಕಳೆದ ಬಾರಿ ಉದ್ಘಾಟನಾ ಸಮಾರಂಭ ಬಹಳ ತಡವಾಗಿ ರಾತ್ರಿವೇಳೆ ನಡೆದಿದ್ದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಜನಸಂದಣಿ ಇಲ್ಲದೇ ಎಲ್ಲಾ ಆಸನಗಳು ಖಾಲಿಯಾಗಿದ್ದವು. ಎಲ್ಲಾ ಕಾರ್ಯಕ್ರಮಗಳಿಗೆ ಸರಿಯಾದ ಸಮಯ ಪಾಲನೆ ಮಾಡಿದರೆ ಒಳಿತು.
- ಕೆಲವೊಂದು ಉಚಿತ ಯೋಜನೆಗಳು ಇರುವಲ್ಲಿ ಉಚಿತ ಊಟ, ಉಚಿತ ಸಾರಿಗೆ, ಉಚಿತ ಪಾಸ್‌ಗಳಿಂದ ನೂಕುನುಗ್ಗಲು ಕಾಲ್ತುಳಿತಗಳು ಆಗಿ ಜನ ನಿಯಂತ್ರಣ ಮಾಡುವುದು ಕ್ಲಿಷ್ಟಕರವಾಗುತ್ತದೆ. ಅವುಗಳು ಆಗದಂತೆ ಎಚ್ಚರಿಕೆ ವಹಿಸುವುದು. ಆರೋಗ್ಯ, ಪ್ರಥಮ ಚಿಕಿತ್ಸೆ, ಆಂಬುಲೆನ್ಸ್, ತುರ್ತು ನಿರ್ಗಮನ ವ್ಯವಸ್ಥೆ ಮಾಡಬೇಕು ಹಾಗೂ ಜನರಿಗೆ ಅದರ ಮಾಹಿತಿ ನೀಡಬೇಕು.
- ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಶಿಕ್ಷಕರೊಂದಿಗೆ ಹಂಪಿ ಉತ್ಸವದಲ್ಲಿ ಪಾಲ್ಗೊಂಡು ನಮ್ಮ ಇತಿಹಾಸ ಪರಂಪರೆಯ ಮಹತ್ವವನ್ನು ಅರಿತು ಮುಂಬರುವ ದಿನಗಳಲ್ಲಿ ಹಂಪಿ ಉತ್ಸವದ ಪರಿಕಲ್ಪನೆ ಮುಂದುವರಿಸುವ ಪ್ರಜ್ಞೆಯನ್ನು ಬೆಳೆಸಬೇಕು.
- ವಿಜಯನಗರ ವೈಭವ ಎಂಬ ಸಾಂಸ್ಕೃತಿಕ ಧ್ವನಿ ಬೆಳಕು ಕಾರ್ಯಕ್ರಮವು ಒಂದು ಭವ್ಯ ಕಾರ್ಯಕ್ರಮವಾಗಿದ್ದು ಇದನ್ನು ಮುಂದುವರೆಸಬೇಕು ಮತ್ತು ಕಾರ್ಯಕ್ರಮ ತಡರಾತ್ರಿವರೆಗೆ ನಡೆಸದೇ, ದೂರದ ಊರುಗಳಿಗೆ ತೆರಳಲು ಸೂಕ್ತ ಸಾರಿಗೆ ವ್ಯವಸ್ಥೆ ಕಲ್ಪಿಸಿದರೆ ಜನರಿಗೆ ಅನುಕೂಲವಾಗುತ್ತದೆ.
- ಹಂಪಿಯು ಒಂದು ವಿಶ್ವ ಪರಂಪರೆಯ ತಾಣವಾಗಿರುವುದರಿಂದ ಈ ಉತ್ಸವದಲ್ಲಿ ಪಟಾಕಿಗಳನ್ನು ಸಿಡಿಸುವುದರಿಂದ ಅಲ್ಲಿನ ವನ್ಯಜೀವಿಗಳಿಗೆ ಹಾಗೂ ಪರಿಸರಕ್ಕೆ ಹಾನಿಯುಂಟಾಗುತ್ತದೆ ಅದನ್ನು ತಡೆಗಟ್ಟಬೇಕು.
- ಹಂಪಿ ಉತ್ಸವಕ್ಕೆ ಪ್ರತೀ ವರ್ಷವೂ ಒಂದು ನಿಗದಿತ ದಿನಾಂಕವನ್ನು ಮೀಸಲಾಗಿ ಇಡಬೇಕು. ಅದು ವಿದ್ಯಾರ್ಥಿಗಳ ಪರೀಕ್ಷಾ ವೇಳೆಯಾಗಿರಬಾರದು. ಈ ರೀತಿಯಲ್ಲಿ ಅರ್ಥಪೂರ್ಣವಾಗಿ ಹಂಪಿ ಉತ್ಸವವನ್ನು ಆಚರಿಸಿದರೆ ಎಲ್ಲರ ಮನಸಿನಲ್ಲೂ ಅಚ್ಚಳಿಯುವುದರಲ್ಲಿ ಸಂಶಯವಿಲ್ಲ.

– **ಪ್ರೊ. ಮಧ್ವರಾಜ್ ಕೊಲ್ಹಾಪುರ್,**
ಪಿ.ಡಿ.ಐ.ಟಿ ಇಂಜಿನಿಯರಿಂಗ್ ಕಾಲೇಜು, ಹೊಸಪೇಟೆ.

**ಹಂಪಿ ಉತ್ಸವ ಆಚರಣೆ ನಮ್ಮೆಲ್ಲರಿಗೆ ಹೆಮ್ಮೆ. ನಾಡಿನ ವಿವಿಧೆಡೆಗಳಿಂದ ಲಕ್ಷಾಂತರ ಜನ ಉತ್ಸವಭಿಮಾನಿಗಳು ಬರುತ್ತಾರೆ, ಪ್ರತಿವರ್ಷವು ಒಂದಿಲ್ಲೊಂದು ಸಮಸ್ಯೆ ಉದ್ಭವಿಸುತ್ತದೆ. ಈ ಹಿಂದ ಆದ ಎಡವಟ್ಟುಗಳು ಈ ಬಾರಿ ಮರುಕಳಿಸದಿರಲಿ.**

- ಹಂಪಿ ಉತ್ಸವದಲ್ಲಿ ಊಟ ಹಾಗೂ ನೀರಿನ ಸಮಸ್ಯೆ ಎದುರಾಗದಿರಲಿ. ಕಾರ್ಯಕ್ರಮಗಳು ನಡೆಯುವ ಸ್ಥಳಗಳಲ್ಲಿ ಸುಲಭವಾಗಿ ದೊರೆಯುವಂತೆ ನೀರಿನ ವ್ಯವಸ್ಥೆಯಾಗಬೇಕು.
- ಕವಿಗೋಷ್ಠಿಯನ್ನು ಕಾರ್ಯಕ್ರಮದ ಕೊನೆಯಲ್ಲಿ ನಡೆಸುವುದರಿಂದ ಬೆರಳೆಣಿಕೆಯಷ್ಟು ಜನ ಮಾತ್ರ ವೇದಿಕೆಯಲ್ಲಿ ಕುಳಿತಿರುತ್ತಾರೆ. ಕವಿಗಳೇ ಕವನ ವಾಚನ ಮಾಡಬೇಕು ಅವರೇ ಕೇಳಬೇಕು ಹೀಗಾಗುತ್ತದೆ. ಕಾರಣ ಕಾರ್ಯಕ್ರಮದ ಮೊದಲ ದಿನವೇ ಕವಿಗೋಷ್ಠಿ ಕಾರ್ಯಕ್ರಮ ಹಮ್ಮಿಕೊಂಡರೆ ಯಶಸ್ವಿಯಾಗುತ್ತದೆ. ಕವಿಗೋಷ್ಠಿಯಲ್ಲಿ ಕವಿಗಳನ್ನು ಆಯ್ಕೆ ಮಾಡುವಾಗ ಯುವ ಕವಿಗಳಿಗೆ ಅವಕಾಶ ಮಾಡಿಕೊಡಬೇಕು. ಆಯ್ಕೆಯಾದವರೆ ಮತ್ತೇ ಮತ್ತೇ ಆಯ್ಕೆಯಾಗುವುದನ್ನು ತಪ್ಪಿಸಬೇಕು ತಾರತಮ್ಯ ಮಾಡಬಾರದು.
- ಲಕ್ಷಾಂತರ ಜನ ಬರುವುದರಿಂದ ಹಂಪಿ ಉತ್ಸವದಲ್ಲಿ ಪಾಲ್ಗೊಳ್ಳುವುದರೊಂದಿಗೆ ಹಂಪಿ ವಿಕ್ಷಣೆ ಮಾಡುತ್ತಾರೆ ಅವರಿಗೆ ಹಂಪಿ ಚರಿತ್ರೆ ಬಲ್ಲ ಗೈಡುಗಳನ್ನು ನೇಮಿಸಬೇಕು.
- ವ್ಯಾಪಾರಸ್ಥರ ಮಳಿಗೆಗಳು ಒಂದೆ ಕಡೆಯಿರುವಂತಾಗಬೇಕು .

– **ಚಂದ್ರಶೇಖರಯ್ಯ ರೋಣದಮಠ.**
**ಹೊಸಪೇಟೆ**

## SSLC ಈ ಬಾರಿ ಫಲಿತಾಂಶ ನಮ್ಮದೆ ಹೈಸ್ಕೋರ್‌ಗೆ

HAMPI TIMES MARGADARSHI

ಈಗಿಂದಲೇ ಪುನರ್‌ಮನನ ಮಾಡಿ

ಪರೀಕ್ಷೆಗೆ ನಾವು ಸಿದ್ಧ 65 ದಿನ

ಮನಸ್ಸು ಮಾಡು-ಕರ್ತವ್ಯ ನಿಷ್ಟನಾಗು-ಕಾದು ನೋಡು

https://epaper.hampitimes.com

ನಿನ್ನ ಏಳಿಗೆ ನಿನೆ ಶಿಲ್ಪಿ³

ಹಂಪಿ ಟೈಮ್ಸ್ ಮಾರ್ಗದರ್ಶಿ SSLC: ಗಣಿತ

**ರಸಪ್ರಶ್ನೆ – 3 ಉತ್ತರಗಳು**

1)(A) 2x5 2) (B) $\frac{n(n+2)}{2}$

3) (D) $a_1 = a_2, b_1=b_2, c_1=c_2$ 4) (B) 3

5)(B) ವರ್ಗಸಮೀಕರಣ 6) A) PQ ಮತ್ತು AB

7) (B) 1-2cos2 A 8) (C) 1 9) 3 10) 3

11) $\sqrt{3}$ 12)3ಮಧ್ಯಾಂಕ = ಬಹುಲಕ +2 ಸರಾಸರಿ


13) $x^2+x-6 = 0$

---

**2024–25 ಸಾಲಿನ ಮಾದರಿ ಪ್ರಶ್ನೆ ಪತ್ರಿಕೆಯ ಪ್ರಶ್ನೆಗಳು**

14) ಮೂಲಬಿಂದುವಿನಿಂದ (6,8) ಈ ಬಿಂದುವಿಗಿರುವ ದೂರವನ್ನು ಕಂಡುಹಿಡಿಯಿರಿ

15) ಚಿತ್ರದಲ್ಲಿ A POQ ~ A ROS ಮತ್ತು PQ || SR ಆಗಿದೆ. PQ : SR = 1 : 2 ಆದರೆ, OS : OQ ನ್ನು ಕಂಡುಹಿಡಿಯಿರಿ




16) ಒಂದು ಸಿಲಿಂಡರ್‌ನ ವೃತ್ತಾಕಾರದ ಪಾದದ ಪರಿಧಿಯು 44 cmಮತ್ತು ಅದರ ಎತ್ತರವು 10 cmಆಗಿದೆ. ಸಿಲಿಂಡರ್‌ನ ವಕ್ರಮೇಲೆ ವಿಸ್ತೀರ್ಣವನ್ನು ಕಂಡುಹಿಡಿಯಿರಿ

17) ವೃತ್ತ ಪರಿಧಿಯ ಮೇಲಿನ ಒಂದು ಬಿಂದುವಿನಲ್ಲಿ ವೃತ್ತಕ್ಕೆ ಎಳೆಯಬಹುದಾದ ಸ್ಪರ್ಶಕಗಳ ಸಂಖ್ಯೆಯು

18) 'a' ಮತ್ತು 'b' ಗಳು ಎರಡು ಧನಪೂರ್ಣಾಂಕಗಳಾದಾಗ ಮ.ಸಾ.ಅ. ( a b ) ಮತ್ತು ಲ.ಸಾ.ಅ.(a b) ಗಳಿಗಿರುವ ಸರಿಯಾದ ಸಂಬಂಧವು

19) $a_1x+b_1y+c_1 = 0$ ಮತ್ತು $a_2x + b_2y+c_2=0$ ರೇಖಾತ್ಮಕ ಸಮೀಕರಣಗಳಲ್ಲಿ $\frac{a_1}{a_2} \neq \frac{b_1}{b_2}$ ಆದಾಗ, ಸಮೀಕರಣಗಳು ಹೊಂದಿರುವ ಪರಿಹಾರಗಳ ಸಂಖ್ಯೆಯು

20) ಒಂದು ಸಮಾಂತರ ಶ್ರೇಢಿಯ 'n' ನೇ ಪದವು 3n – 1 ಆದಾಗ, ಅದರ 8ನೇ ಪದವು

21) $P(x) = x^3 - 1$ ಈ ಬಹುಪದೋಕ್ತಿಯ ಗರಿಷ್ಠ ಶೂನ್ಯತೆಗಳ ಸಂಖ್ಯೆ

22) ಒಂದು ನೇರವೃತ್ತಪಾದ ಸಿಲಿಂಡರಿನ ಘನಫಲ 1540 $cm^3$ ಮತ್ತು ಎತ್ತರ 10 cm ಆದರೆ, ಅದರ ಪಾದದ ವಿಸ್ತೀರ್ಣವು

23) ವರ್ಗೀಕೃತ ದತ್ತಾಂಶಗಳ ಸರಾಸರಿಯನ್ನು ನೇರ ವಿಧಾನದಿಂದ ಕಂಡುಹಿಡಿಯುವ ಸೂತ್ರವು, X=

24) $\frac{1-tan^2 45^0}{1+tan^2 45^0}$ ಗೆ ಸಮವಾದುದು

25) ಒಂದು ಸಮಾಂತರ ಶ್ರೇಢಿಯ ಮೊದಲನೇ ಪದ 'a' ಮತ್ತು ಕೊನೆಯ ಪದ '$a_n$' ಆದಾಗ, ಶ್ರೇಢಿಯ ಮೊದಲ 'n' ಪದಗಳ ಮೊತ್ತವನ್ನು ಕಂಡುಹಿಡಿಯುವ ಸೂತ್ರವನ್ನು ಬರೆಯಿರಿ.

26) A ( X, Y ) ಮತ್ತು B ( $x_2$, $y_2$) ಬಿಂದುಗಳನ್ನು ಸೇರಿಸುವ ರೇಖಾಖಂಡದ ಮಧ್ಯಬಿಂದುವಿನ ನಿರ್ದೇಶಾಂಕಗಳನ್ನು ಬರೆಯಿರಿ.

27) $x + y - 4 = 0$ ಮತ್ತು $2x + by - 3 = 0$ ಪರಿಹಾರವನ್ನು ಹೊಂದಿಲ್ಲದಿದ್ದರೆ, 'b' ಯ ಬೆಲೆಯನ್ನು ಕಂಡುಹಿಡಿಯಿರಿ.

28) 24 m ಮತ್ತು 36 m ಉದ್ದವಿರುವ ಸಲಾಕೆಗಳನ್ನು ಪೂರ್ಣವಾಗಿ ಅಳೆಯಬಹುದಾದ ಸಲಾಕೆಯ ಗರಿಷ್ಠ ಉದ್ದವನ್ನು ಕಂಡುಹಿಡಿಯಿರಿ.

29) ಒಂದು ಘನಗೋಳದ ಮೇಲ್ಮೈ ವಿಸ್ತೀರ್ಣವನ್ನು ಕಂಡುಹಿಡಿಯುವ ಸೂತ್ರವನ್ನು ಬರೆಯಿರಿ.

30) $P(x) = x^2 + 7x + k$ ಈ ಬಹುಪದೋಕ್ತಿಯ ಒಂದು ಶೂನ್ಯತೆ 2 ಆದರೆ k ಬೆಲೆಯನ್ನು ಕಂಡುಹಿಡಿಯಿರಿ.

ಉತ್ತರಕ್ಕಾಗಿ ನಿರೀಕ್ಷಿಸಿ

ಮಾರ್ಗದರ್ಶಿ ಶಿಕ್ಷಕರು : ಎಂ.ಎಸ್.ಮಂಜುನಾಥ, ಶಿಕ್ಷಕರು, ಚಿಲುಗೋಡು, ಹಗರಿಬೊಮ್ಮನಹಳ್ಳಿ (ತಾ) ವಿಜಯನಗರ (ಜಿಲ್ಲೆ)

ಸಾಯಿಮಣಿ ಪ್ರಕಾಶನ, ಹೊಸಪೇಟೆ

- Admissions
- Requirements
- Firm Branding
- Public Notice
- Change of Name

BOOK NOW!

Book Your Advertisements
in Leading Local HAMPI TIMES
Print & Digital News Paper
9482599089 / 9448633038

- Obituary
- Remembrance
- Birthday wish ads
- Events Display &
- Classified ads

SHUBHA Ads C/o HAMPI TIMES, Bamboo Bazaar, Nr Valmiki Circle, Hospete-583201 Vijayanagara Dist.


ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ದಿನಪತ್ರಿಕೆ ಇರಲಿ.
ಡಿ..ವಿ.ಜಿ.



## ತುಂಗಭದ್ರಾ ನೀರಿನ ಮಟ್ಟ

ಮಂಗಳವಾರ : 14-01-2025

| | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1623.06 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 9839 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 70.327 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

ಕಳೆದ ವರ್ಷ ಇದೇ ದಿನ

| | |
|---|---|
| ಇಂದಿನ ಮಟ್ಟ | 1588.95 ಅಡಿ |
| ಒಳ ಹರಿವು | 0 ಕ್ಯುಸೆಕ್ |
| ಹೊರ ಹರಿವು | 0 ಕ್ಯುಸೆಕ್ |
| ಸಾಮರ್ಥ್ಯ | 10.174 ಟಿಎಂಸಿ |

## ನಿತ್ಯ ಪಂಚಾಂಗ

ಮಾಸ: ಪುಷ್ಯ । ಸಂವತ್ಸರ: ಕ್ರೋಧಿ

15-01-2025 – ಬುಧವಾರ

| | |
|---|---|
| ತಿಥಿ | : ದ್ವಿತೀಯ |
| ಪಕ್ಷ | : ಕೃಷ್ಣ |
| ನಕ್ಷತ್ರ | : ಪುಷ್ಯ |
| ಯೋಗ | : ಪ್ರೀತಿ |
| ಕರಣ | : ತೈತುಲ |
| ಸೂರ್ಯೋದಯ | : 07:11:39 |
| ಸೂರ್ಯಾಸ್ತ | : 18:01:21 |
| ರಾಹು ಕಾಲ | : 12:37–13:58 |
| ಯಮಘಂಡ ಕಾಲ | : 08:33–09:54 |
| ಗುಳಿಕ ಕಾಲ | : 11:15–12:58 |

### ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ತ್ರಿಸೂತ್ರಗಳು

1. ಶಾಲೆಗೆ ಹೋಗದ ಶಿಕ್ಷಕರನ್ನು (Drop out teachers) ಶಾಲೆಗೆ ಕಳುಹಿಸಿ
2. ಶಾಲೆಗೆ ಹೋದ ಶಿಕ್ಷಕರನ್ನು ತರಗತಿಗೆ ಕಳಿಸಿ
3. ತರಗತಿಗೆ ಹೋದ ಶಿಕ್ಷಕರಿಂದ ಪಾಠ ಮಾಡಿಸಿ..

- ಮಹಿಮ


ಭಾವಪೂರ್ಣ ಶ್ರದ್ಧಾಂಜಲಿ
ನಿಧನ - ಪುಣ್ಯ ಸ್ಮರಣೆ
ಜಾಹೀರಾತುಗಳಿಗೆ
ವಿಶೇಷ ರಿಯಾಯತಿ
ನಿಧನದ ಬಗ್ಗೆ ಕುಟುಂಬ, ಸ್ನೇಹಿತರು, ಮತ್ತು ಪರಿಚಿತರಿಗೆ ಶೀಘ್ರ ಮತ್ತು ಸರಿಯಾದ ಮಾಹಿತಿ ನೀಡಲು ಇದು ನೆರವಾಗುತ್ತದೆ.
ಜಾಹೀರಾತು ನೀಡಲು ಸಂಪರ್ಕಿಸಿ
ಹಂಪಿ ಟೈಮ್ಸ್
94486 33038


# ಕಾಯಕ ತತ್ವ ಪಾಲಿಸೋಣ

## ಮೇಯರ್ ಮುಲ್ಲಂಗಿ ನಂದೀಶ್ ಹೇಳಿಕೆ । ಬಳ್ಳಾರಿಯಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ಜಯಂತ್ಯೋತ್ಸವ





■ **ಹಂಪಿ ಟೈಮ್ಸ್ ಬಳ್ಳಾರಿ**

12 ನೇ ಶತಮಾನದ ವಚನ ಸಾಹಿತ್ಯದ ವಚನಕಾರರಲ್ಲಿ ಒಬ್ಬರಾದ ಶಿವಯೋಗಿ ಶರಣ ಸಿದ್ದರಾಮೇಶ್ವರರ ಕಾಯಕಯೋಗಿ ತತ್ವಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳೋಣ ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಮಂಗಳವಾರ ಆಯೋಜಿಸಿದ್ದ ಶಿವಯೋಗಿ ಸಿದ್ಧರಾಮೇಶ್ವರ 853ನೇ ಜಯಂತಿ ಕಾರ್ಯಕ್ರಮ ವನ್ನು ಸಿದ್ಧರಾಮೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸಿದ್ದರಾಮೇಶ್ವರರ ತತ್ವವು ಮನುಕುಲದ ಸೇವೆ, ಶಿವಯೋಗದ ಮಾರ್ಗ ವಾಗಿತ್ತು. ವಚನ ಸಾಹಿತ್ಯವನ್ನು ವಿನಾಶದಿಂದ ಪಾರು ಮಾಡುವಲ್ಲಿ ಸಿದ್ದರಾಮೇ ಶ್ವರರು ಕೂಡ ಒಬ್ಬರಾಗಿದ್ದರು ಎಂದು ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಅವರು ಮಾತನಾಡಿ, ಸಿದ್ದರಾಮೇಶ್ವರರು ಜಾತಿ ಮತ್ತು ಲಿಂಗ ತಾರತಮ್ಯದ ಕುರುಡು ಸಂಪ್ರದಾಯಗಳನ್ನು ತಿರಸ್ಕರಿಸಿದ್ದರು. ವೈಯಕ್ತಿಕ ಅನುಭವದ ಮೂಲಕ ಸಾಕ್ಷರತೆಗೆ ಒತ್ತು ನೀಡಿದ್ದರು. ಸಮ ಸಮಾಜ ಕಟ್ಟುವಲ್ಲಿ ಕನಸು ಕಂಡಿದ್ದವರು ಎಂದು ಹೇಳಿದರು.

ಸಿದ್ದರಾಮೇಶ್ವರರು 12 ನೇ ಶತಮಾನದ ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ ಯರಂತಹ ವಚನ ಸಾಹಿತ್ಯಕಾರರ ಸಾಲಿನಲ್ಲಿ ಇವರು ಕೂಡ ಪ್ರಬುದ್ಧ ವಚನಕಾರರಾಗಿದ್ದರು ಎಂದು ತಿಳಿಸಿದರು.

ಹೊಸಪೇಟೆಯ ವಿಜಯನಗರ ಮಹಾವಿದ್ಯಾಲ ಯದ ಸಹಾಯಕ ಪ್ರಾಧ್ಯಾಪಕರಾದ ಗಾದೆಪ್ಪ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಸಿದ್ದರಾಮೇಶ್ವರ ಅವರು ಕ್ರಿ.ಶ 12ನೇ ಶತಮಾನದ ಸುಪ್ರಸಿದ್ಧ ಶರಣರ ಶರಣರ ಪರಂಪರೆಯಲ್ಲಿ ಗುರುತಿಸಿಕೊಂಡವರು. ತನ್ನ ಸ್ವಂತ ಕಾಯಕದ ಮೂಲಕ ಅಪ್ರತಿಮ ಶರಣನಾಗಿ ರೂಪಗೊಂಡವನು ಎಂದರು.

ಸಿದ್ದರಾಮೇಶ್ವರರು ಸೊನ್ನಲಿಗೆ ಎಂಬ ಪುಟ್ಟ ಹಳ್ಳಿಯಲ್ಲಿ (ಮಹಾರಾಷ್ಟ್ರದ ಸೊಲ್ಲಾಪುರ) ಜನಿಸಿದ ವರು. ಅವರ ತಂದೆ ಮುದ್ದುಗೌಡ, ತಾಯಿ ಸುಗ್ಗವ್ವ. ಸಿದ್ಧರಾಮೇಶ್ವರರು ವಚನಗಳನ್ನು ರಚಿಸಿ ರುವುದು ಮಾತ್ರವಲ್ಲದೆ, ವಚನ ಸಂರಕ್ಷಣೆಯೂ ಮಾಡಿದ್ದಾರೆ. ಕೆರೆ, ಕಟ್ಟೆ ಕಟ್ಟಿಸಿ ಜನೋಪಯೋಗಿ ಕಾರ್ಯ ಕೈಗೊಂಡರು. ಶರಣತತ್ವದ ಪರಿಪಾಲಕ ರಾಗಿದ್ದರು ಎಂದರು.

ಕಾರ್ಯಕ್ರಮದಲ್ಲಿ ರಾಘವೇಂದ್ರ ಗುಡುದೂರು ತಂಡದಿಂದ ಭಕ್ತಿ ಸಂಗೀತ ಕಾರ್ಯಕ್ರಮ ನೆರವೇರಿಸಿಕೊಟ್ಟರು.

**ಅದ್ದೂರಿ ಮೆರವಣಿಗೆ:** ಶಿವಯೋಗಿ ಸಿದ್ದ ರಾಮೇಶ್ವರ ಜಯಂತಿ ಅಂಗವಾಗಿ ನಗರದಲ್ಲಿ ಅದ್ದೂರಿ ಮೆರವಣಿಗೆ ನಡೆಯಿತು. ಮೆರವಣಿಗೆಗೆ ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಅವರು ಸಿದ್ದರಾಮೇಶ್ವರ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಚಾಲನೆ ನೀಡಿದರು.

ಡೊಳ್ಳು ವಾದ್ಯ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಲಾತಂಡಗಳೊಂದಿಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಮೆರವಣಿಗೆಯು ಆರಂಭಗೊಂಡು ಗಡಿಗೆ ಚೆನ್ನಪ್ಪ ವೃತದಿಂದ ಬೆಂಗಳೂರು ರಸ್ತೆ, ತೇರು ಬೀದಿ, ಜೈನ್ ಮಾರ್ಕೆಟ್, ಹೆಚ್.ಆರ್. ಗವಿಯಪ್ಪ ವೃತದ ಮಾರ್ಗವಾಗಿ ಡಾ. ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವರೆಗೆ ತಲುಪಿ ಸಂಪನ್ನಗೊಂಡಿತು.

ಕಾರ್ಯಕ್ರಮದಲ್ಲಿ ಸಹಾಯಕ ಆಯುಕ್ತರಾದ ಪ್ರಮೋದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಭೋವಿ ಸಂಘ ಅಧ್ಯಕ್ಷ ವಿ.ರಾಮಾಂಜನೇಯ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು, ಸಮುದಾಯದ ಮುಖಂಡರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಇತರರಿದ್ದರು.

# ದುಡಿಮೆ ಪೂಜಿಸಿದರೆ ಬದುಕು ಶ್ರೇಷ್ಠ

## ಶ್ರೀ ಸಿದ್ದರಾಮೇಶ್ವರ ಜಯಂತಿ ಆಚರಣೆ



■ **ಹಂಪಿ ಟೈಮ್ಸ್ ಕೂಡ್ಲಿಗಿ**

ಬದುಕು ಶ್ರೇಷ್ಠವಾಗಬೇಕಾದರೆ ದುಡಿಮೆಯನ್ನು ಪೂಜಿಸಬೇಕು ಎಂದು ಗ್ರೇಡ್ 2 ತಹಸೀಲ್ದಾರ್ ವಿ.ಕೆ.ನೇತ್ರಾವತಿ ಹೇಳಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಮಂಗಳವಾರ ತಾಲೂಕು ಆಡಳಿತ, ತಾಲೂಕು ಭೋವಿ ಸಮಾಜದ ವತಿಯಿಂದ ಏರ್ಪಡಿಸಿದ್ದ ಶ್ರೀ ಸಿದ್ದರಾಮೇಶ್ವರ ಜಯಂತಿ ಕಾರ್ಯಕ್ರಮದಲ್ಲಿ ಶ್ರೀ ಸಿದ್ದರಾಮೇಶ್ವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. 12ನೇ ಶತಮಾನದ ಮಹಾಶರಣ ಶ್ರೀ ಸಿದ್ದರಾಮೇಶ್ವರ ಸಮಾಜದ ಒಳಿತಿಗಾಗಿ ಬದುಕಿದ ನಿಜವಾದ ಕಾಯಕ ಯೋಗಿ. ಅವರು ಡಂಭಾಚಾರದ ಪವಾಡಗಳನ್ನು ಸೃಷ್ಟಿಸಲಿಲ್ಲ. ಬದಲಾಗಿ ಅನಕ್ಷರಸ್ಥರನ್ನು ಅಕ್ಷರಸ್ಥರನ್ನಾಗಿಸುವ ಪವಾಡ ಮಾಡಿದರು. ಹೀಗಾಗಿ ಪವಾಡಗಳನ್ನು ಸೃಷ್ಟಿವುದು ಮನುಷ್ಯನೇ ಹೊರತು ದೇವರಲ್ಲ. ಮನುಷ್ಯ ಮನಸ್ಸು ಮಾಡಿದರೆ ಏನನ್ನು ಬೇಕಾದರೂ ಸಾಧಿಸಬಲ್ಲ ಎಂಬುದನ್ನು ಅವರು 12ನೇ ಶತಮಾನದಲ್ಲಿಯೇ ತೋರಿಸಿಕೊಟ್ಟಿದ್ದಾರೆ. ಅವರನ್ನು ಸ್ಫೂರ್ತಿಯನ್ನಾಗಿಸಿಕೊಂಡು ಇಂದಿನ ಯುವ ಪೀಳಿಗೆ ಸಾಧನೆಯ ಶಿಖರವನ್ನೇರಬೇಕು. ಜಾತಿ, ಮತ, ಪಂಥಗಳೆನ್ನದೆ ಶ್ರೀ ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಎಲ್ಲರೂ ಆಚರಿಸಬೇಕು. ಅಲ್ಲದೆ, ಅವರ ಆದರ್ಶವನ್ನು ಪಾಲಿಸಬೇಕು ಎಂದು ತಿಳಿಸಿದರು.

ಕಜಾಪ ಅಧ್ಯಕ್ಷ ಕೆ.ಎಂ.ವೀರೇಶ್ ಮಾತನಾಡಿ, ವಚನಗಳ ಮೂಲಕ ಸಮಾಜದ ಅಂಕುಡೊಂಕುಗಳನ್ನು ಸರಿಪಡಿಸಿದ ಶ್ರೀಶಿವಯೋಗಿ ಸಿದ್ದರಾಮೇಶ್ವರ ಅವರು ಅನುಭವ ಮಂಟಪದ ಧೃವತಾರೆ. ವಚನಗಳ ಮೂಲಕ ಜಗತ್ತಿಗೆ ಅಪಾರವಾದ ಕೊಡುಗೆ ನೀಡಿದ್ದಾರೆ, 12ನೇ ಶತಮಾನದಲ್ಲಿ ಮನುಕುಲದಲ್ಲಿ ಅದರಲ್ಲಿಯೂ ಭರತ ಖಂಡದಲ್ಲಿ ಸಾಕಷ್ಟು ಬದಲಾವಣೆಯಾಯಿತು. ಶ್ರೀ ಬಸವೇಶ್ವರ ನೇತೃತ್ವದಲ್ಲಿ ಅನುಭವ ಮಂಟಪ ಪ್ರಾರಂಭವಾಗಿದ್ದು, ಅದರ ಮೂಲಕ ಸಮಾಜದ ಅಭಿವೃದ್ಧಿಗೆ ಬೇಕಾದಂತಹ ವಿಚಾರಗಳು ಹಾಗೂ ಚರ್ಚೆಗಳು ನಡೆಯುತ್ತಿದ್ದವು. ಇದು ಹೆಮ್ಮೆಯ ವಿಚಾರವಾಗಿದೆ ಎಂದು ತಿಳಿಸಿದರು.

ಬಿಇಒ ಪದ್ಮನಾಭ ಕರಣಂ, ತಾಲೂಕು ಶಿಕ್ಷಣ ಸಮನ್ವಯಾಧಿಕಾರಿ ಎಸ್.ಎಸ್.ಜಗದೀಶ್, ಭೋವಿ ಸಮಾಜದ ತಾಲೂಕು ಅಧ್ಯಕ್ಷ ಮಾರೇಶ್, ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎಸ್.ವೆಂಕಟೇಶ, ವಕೀಲ ಸಾಣೇಹಳ್ಳಿ ಹನುಮಂತಪ್ಪ, ಸಿ.ಎಸ್.ಪುರ ವೆಂಕಟೇಶ, ಯಂಬಳಿ ಮಾರಪ್ಪ, ಯಂಬಳಿ ರಮೇಶ, ಡಿ.ಕೊಟ್ರೇಶ್, ಕೊಟ್ಲೇಶ್, ಹುರಳಿಹಾಳು ಬಜ್ಜಪ್ಪ, ವೆಂಕಟೇಶ ಯಂಬಳಿ, ಕಂಪ್ಲಿ ಬಸವರಾಜ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ರೈಲು ನಿಲ್ದಾಣ ಅಭಿವೃದ್ಧಿಗೆ 2 ಸಾವಿರ ಕೋಟಿ ರೂ.

**ಮೊದಲ ಪುಟದಿಂದ**

ಅತ್ಯವಶ್ಯಕವಾಗಿತ್ತು. ಇದರ ಉದ್ಘಾಟನೆಯಿಂದ ದಕ್ಷಿಣ ಭಾರತ ಕುಂಭಮೇಳ ಎಂದು ಹೆಸರಾದ ಶ್ರೀ ಗವಿಸಿದ್ದೇಶ್ವರ ಜಾತ್ರೆಗೆ ಆಗಮಿಸುವ ಭಕ್ತಾದಿಗಳ ಸಂಚಾರಕ್ಕೂ ಅನುಕೂಲವಾಗಿದೆ. ಈ ಸೇತುವೇ ನಿರ್ಮಾಣಕ್ಕಾಗಿ ಮಾಜಿ ಸಂಸದರಾದ ಕರಡಿ ಸಂಗಣ್ಣನವರ ಪ್ರಯತ್ನ ಬಹಳಷ್ಟಿದೆ. ಈ ಸೇತುವೆಗೆ ವೀರರಾಣಿ ಕಿತ್ತೂರು ಚೆನ್ನಮ್ಮನವರ ಹೆಸರಿಡಬೇಕೆಂಬುದು ಬಹು ಜನರ ಬೇಡಿಕೆಯಾಗಿದ್ದು, ಇದಕ್ಕೆ ಅನುಕೂಲ ಮಾಡಿಕೊಡಬೇಕು. ಬಾಗಲ ಕೋಟೆ–ಗಂಗಾವತಿ ಮತ್ತು ಗಂಗಾವತಿ –ದರೋಜಿ ರೈಲು ಮಾರ್ಗಗಳನ್ನು ಮಂಜೂರು ಮಾಡಿಕೊಡಬೇಕು. ಕೊಪ್ಪಳ ನಗರದ ಗಂಗಾವತಿ ರಸ್ತೆಯ ಮೆಡಿಕಲ್ ಕಾಲೇಜು ಹತ್ತಿರದ ಕಿಡಿದಾಳ ಗೇಟ್‌ನಲ್ಲಿ ಮೇಲ್ಸೇತುವೆ ಕಾಮಗಾರಿಯನ್ನು ತ್ವರಿತವಾಗಿ ಆರಂಭಿಸಿದರೆ, ಜನರಿಗೆ ಅನುಕೂಲವಾಗುತ್ತದೆ. ಹನುಮನ ಜನ್ಮಸ್ಥಳವಾದ ಅಂಜನಾದ್ರಿಯಿಂದ



ಅಯೋಧ್ಯೆಗೆ ವಂದೇ ಭಾರತ್ ರೈಲಿನ ವ್ಯವಸ್ಥೆ ಮಾಡಿಕೊಡಬೇಕೆಂದು ಹೇಳಿದರು.

ಕರ್ನಾಟಕ ವಿಧಾನಸಭೆ ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ, ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ, ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಸಚಿವರು ಕಾರ್ಯಕ್ರಮಕ್ಕೂ ಮುಂಚೆ ಶ್ರೀ ಗವಿಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿದರು. ಕಾರ್ಯಕ್ರಮದ ನಂತರ ಕೊಪ್ಪಳ ರೈಲು ನಿಲ್ದಾಣದಲ್ಲಿ ನಡೆಯುತ್ತಿರುವ ಅಮೃತ ಭಾರತ್ ಸ್ಟೇಶನ್ ಕಾಮಗಾರಿಗಳ ಪರಿಶೀಲನೆ ನಡೆಸಿದರು.



ಕಾರ್ಯಕ್ರಮದಲ್ಲಿ ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮಜದ್ ಪಟೇಲ್, ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀನಿವಾಸ ಗುಪ್ತಾ, ಮಾಜಿ ಸಂಸದ ಶಿವರಾಮೆಗೌಡ, ನೈರುತ್ಯ ರೈಲ್ವೆ ಹುಬ್ಬಳ್ಳಿಯ ವಿಭಾಗೀಯ ವ್ಯವಸ್ಥಾಪಕರಾದ ಬೇಲಾ ಮೀನಾ, ಕನ್‌ಸ್ಟ್ರಕ್ಷನ್ ಸಿಇಓ ಬೆಂಗಳೂರಿನ ಅಜಯ್ ಶರ್ಮಾ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ರೈಲ್ವೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸೋಗಿ ವೀರಭದ್ರೇಶ್ವರಸ್ವಾಮಿ ರಥೋತ್ಸವ



ಹೂವಿನ ಹಡಗಲಿ ತಾಲೂಕು ಸೋಗಿ ವೀರಭದ್ರೇಶ್ವರ ಸ್ವಾಮಿ ರಥೋತ್ಸವವು ಲಕ್ಷಾಂತರ ಭಕ್ತ ಸ್ತೋಮದಲ್ಲಿ ಮಂಗಳವಾರ ವಿಜೃಂಭಣೆಯಿಂದ ನೆರವೇರಿತು.


# ಜಂಗಮಸೋವೆನಹಳ್ಳಿ, ಕೂಡ್ಲಿಗಿ ತಾಲೂಕು, ವಿಜಯನಗರ ಜಿಲ್ಲೆ
SHREE SHANKAR ENTERPRISES LTD.
ಉತ್ತಮ ಆರೋಗ್ಯಕ್ಕಾಗಿ
ಗಾಣದ ಪರಿಶುದ್ಧ ಎಣ್ಣೆ ಬಳಸಿ
ಶೇಂಗ ಎಣ್ಣೆ
ಕೊಬ್ಬರಿ ಎಣ್ಣೆ
ಶ್ರೀಶಂಕರಎಂಟರ್‌ಪ್ರೈಸಸ್‌ಲಿ.
CONTACT FOR WHOLESALE & RETAIL COLD PRESSED OIL
M:90083 66606